# ನಮ್ಮ ಜನ NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ –305 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ: 01–07–2025 ಮಂಗಳವಾರ | ಪುಟ: 4 | ಬೆಲೆ : ರೂ.2–00
Volume - 02 Issue - 305 | RNI No: KARKAN/2023/88462 | KA/SK/CTA-874/2024-2026 | Chitradurga | Date: 01-07-2025 Tuesday | Page: 4 | Price: Rs. 2-00



ಒಳಪುಟದ ಸುದ್ದಿಗಳು
ಯಾರು ಸಹ ತಿನ್ನುವ ಅನ್ನಕ್ಕೆ, ಕುಡಿಯುವ ನೀರಿಗೆ ಅಡ್ಡಿಪಡಿಸುವುದು ಅಕ್ಷಮ್ಯ 2
ನಗರದ ವಾಣಿಜ್ಯ ಸಂಕೀರ್ಣಗಳ ಕಾಮಗಾರಿ ಪುನರಾರಂಭಕ್ಕೆ ಚಿಂತನೆ 3
ನಗರದ ಅಭಿವೃದ್ಧಿಗೆ ಶ್ರಮಿಸಿ: ಶಾಸಕ ಟಿ.ರಘುಮೂರ್ತಿ ಸಲಹೆ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಲಿಪಿಕ ಸಿಬ್ಬಂದಿ ನೇಮಕ: ಮಾಜಿ ಸೈನಿಕರಿಂದ ಅರ್ಜಿ ಆಹ್ವಾನ

» ಚಿತ್ರದುರ್ಗ

ಶಿವಮೊಗ್ಗ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಕಚೇರಿಗೆ ಹೊರಗುತ್ತಿಗೆ ಆಧಾರದಲ್ಲಿ ಓರ್ವ ಲಿಪಿಕ ಸಿಬ್ಬಂದಿಯನ್ನು ಲಿಖಿತ ಪರೀಕ್ಷೆಯ ಆಧಾರದಲ್ಲಿ ನೇಮಕ ಮಾಡಿಕೊಳ್ಳಲಾಗುತ್ತದೆ. ಈ ಸಂಬಂಧ ಮಾಜಿ ಸೈನಿಕರಿಂದ ಅರ್ಜಿ ಆಹ್ವಾನಿಸಲಾಗಿದೆ. ಈ ನೇಮಕಾತಿಯು ಸಂಪೂರ್ಣ ತಾತ್ಕಾಲಿಕವಾಗಿದ್ದು, 60 ವರ್ಷಗಳ ವಯೋಮಿತಿ ಮೀರದ ಮಾಜಿ ಸೈನಿಕರಿಗೆ ಮೀಸಲಾಗಿರುತ್ತದೆ. ಈ ನೇಮಕಾತಿಯು ಸರ್ಕಾರದ ಖಾಯಂ ಹುದ್ದೆಗೆ ಸಮನಾಗಿರುವುದಿಲ್ಲ. ಮತ್ತು ಸೇವಾ ಖಾಯಮಾತಿಗೆ ಅವಕಾಶವಿರುವುದಿಲ್ಲ. ಕೇಂದ್ರ ಸಶಸ್ತ್ರ ಸೇನಾಪಡೆಗಳ ಯಾವುದಾದರೂ ಒಂದು ವಿಭಾಗದಲ್ಲಿ ಲಿಪಿಕ ನೌಕರರಾಗಿ ಸೇವೆ ಸಲ್ಲಿಸಿರಬೇಕಿದೆ. ಸೇನಾ ಸೇವೆಯ ನಿವೃತ್ತಿ ನಂತರ ಕೇಂದ್ರ, ರಾಜ್ಯ ಸರ್ಕಾರದ ಕಚೇರಿಗಳಲ್ಲಿ ಲಿಪಿಕ ನೌಕರರಾಗಿ ಖಾಯಂ, ಹಂಗಾಮಿಯಾಗಿ ಕನಿಷ್ಟ ಒಂದು ವರ್ಷ ಕಾರ್ಯನಿರ್ವಹಿಸಿದವರಿಗೆ ಆದ್ಯತೆ ನೀಡಲಾಗುತ್ತದೆ. ಕನ್ನಡ, ಹಿಂದಿ ಮತ್ತು ಆಂಗ್ಲಭಾಷೆಗಳಲ್ಲಿ ಸಂವಹನವು (ಬರೆಯಲು, ಓದಲು, ಮಾತನಾಡಲು) ಮತ್ತು ಗಣಕ ಯಂತ್ರದಲ್ಲಿ ಕನ್ನಡ, ಇಂಗ್ಲಿಷ್ ಬೆರಳಚ್ಚು ಪ್ರಾವೀಣ್ಯತೆಯು ಅಗತ್ಯವಾಗಿರುತ್ತದೆ. ಆಸಕ್ತರು ಜುಲೈ 7 ರ ಸಂಜೆ 5 ಗಂಟೆಯ ಒಳಗೆ ಅಗತ್ಯ ದಾಖಲೆಗಳನ್ನು ಲಗತ್ತಿಸಿ, ಪೂರ್ಣ ಸ್ವವಿವರಗಳೊಂದಿಗೆ ತಮ್ಮ ಸ್ವಹಸ್ತಾಕ್ಷರದಲ್ಲಿ ಅರ್ಜಿಯನ್ನು ಉಪನಿರ್ದೇಶಕರು, ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ, ಶಿವಮೊಗ್ಗ ಇವರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ 08182–2220925 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

### ಹೊಸದುರ್ಗ: ಕಾರ್ಮಿಕ ನಿರೀಕ್ಷಕರ ಕಚೇರಿ ಸ್ಥಳಾಂತರ

» ಚಿತ್ರದುರ್ಗ

ಹೊಸದುರ್ಗ ನಗರದ ರಾಯ್ಕರ್ ಆಸ್ಪತ್ರೆ ಹತ್ತಿರ ಇರುವ ರಾಗಿ ಕಾಂಪ್ಲೇಕ್ಸ್ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿದ್ದ ಹೊಸದುರ್ಗ ವೃತ್ತ ಕಾರ್ಮಿಕ ನಿರೀಕ್ಷಕರ ಕಚೇರಿಯನ್ನು ಸ್ಥಳಾಂತರಿಸಲಾಗಿದೆ. ಈ ಕಚೇರಿಯನ್ನು ಕಾರ್ಮಿಕರ ನಿರೀಕ್ಷಕರ ಕಛೇರಿ, ಹೊಸದುರ್ಗ ವೃತ್ತ, ಹೊಸದುರ್ಗ, "ಹೊಸ ಮನೆ ನಿವಾಸ" ಎಚ್.ಪಿ.ಪೆಟ್ರೋಲ್ ಬಂಕ್ ಹಿಂಭಾಗ, ಹೊಳಲ್ಕೆರೆ ರಸ್ತೆ, ಆಂಜನೇಯ ಬಡಾವಣೆ, ಹೊಸದುರ್ಗ–577527 ಹೊಸ ಕಟ್ಟಡಕ್ಕೆ ಜೂನ್ 27 ರಂದು ಸ್ಥಳಾಂತರಿಸಲಾಗಿದೆ. ಸಾರ್ವಜನಿಕರು ಸ್ಥಳಾಂತಗೊಂಡಿರುವ ಕಚೇರಿಯ ವಿಳಾಸಕ್ಕೆ ಭೇಟಿ ನೀಡಿ, ಅಗತ್ಯ ಸೇವೆ ಹಾಗೂ ಮಾಹಿತಿಯನ್ನು ಪಡೆದುಕೊಳ್ಳಬಹುದು ಎಂದು ಹೊಸದುರ್ಗ ಕಾರ್ಮಿಕ ನಿರೀಕ್ಷಕರು ತಿಳಿಸಿದ್ದಾರೆ.

### ಪರಶುರಾಂಪುರ: ಸರ್ಕಾರಿ ಸೌಲಭ್ಯ ದುರುಪಯೋಗಕ್ಕೆ ಜು.03ಕ್ಕೆ ಗ್ರಾಪಂ ತನಕ ಪಾದಯಾತ್ರೆ

» ಪರಶುರಾಂಪುರ

ಹೋಬಳಿಯ ಸಮೀಪದ ಕೊರ್ಲಕುಂಟೆ ಗ್ರಾಮದಲ್ಲಿ ಎಸ್‌ಸಿಪಿ/ಟಿಎಸ್‌ಪಿ ಯೋಜನೆಯಲ್ಲಿ ಸೋಲಾರ್ ಲೈಟ್‌ಗಳನ್ನು ಸಾರ್ವಜನಿಕ ಸ್ಥಳಗಳಲ್ಲಿ ಅಳವಡಿಕೆ ಮಾಡುವ ಬದಲು, ವೈಯಕ್ತಿಕವಾಗಿ ರೈತರ ಜಮೀನುಗಳಲ್ಲಿ ಅಳವಡಿಕೆ ಮಾಡುವ ಮೂಲಕ ಸರ್ಕಾರಿ ಸೌಲಭ್ಯವನ್ನು ದುರುಪಯೋಗ ಮಾಡಿಕೊಂಡಿರುವವರ ಮತ್ತು ಇಲಾಖೆ ಅಧಿಕಾರಿ, ಗುತ್ತಿಗೆದಾರರ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿ, ಜು. 03. ರಂದು ಬೆಳಗ್ಗೆ 10 ಗಂಟೆಯಿಂದ ಕೊರ್ಲಕುಂಟೆ ಗ್ರಾಮದಿಂದ 6 ಕಿಮೀ ದೂರದ ಪಗಡಲಬಂಡೆ ಗ್ರಾಮ ಪಂಚಾಯಿತಿ ಕಚೇರಿ ತನಕ ಗ್ರಾಮಸ್ಥರೊಂದಿಗೆ ಪ್ರತಿಭಟನೆ ಹಮ್ಮಿಕೊಂಡಿರುವುದಾಗಿ ಗ್ರಾಪಂ ಮಾಜಿ ಸದಸ್ಯ ಕೊರ್ಲಕುಂಟೆ ತಿಪ್ಪೇಸ್ವಾಮಿ ತಿಳಿಸಿದ್ದಾರೆ. ಈಗಾಗಲೇ ಪ್ರತಿಭಟನಾ ಸಂಬಂಧ ತಹಸೀಲ್ದಾರರು ಮತ್ತು ಸ್ಥಳೀಯ ಪೊಲೀಸ್ ಠಾಣಾ ಅಧಿಕಾರಿಗಳ ಅನುಮತಿಯನ್ನೂ ಪಡೆದುಕೊಂಡಿರುವುದಾಗಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಸಿದ್ದರಾಮಯ್ಯನವರಿಂದ ಅಭಿವೃದ್ಧಿ ಕುಂಠಿತ ಜೆಡಿಎಸ್ ಕಿಡಿ

# ಭ್ರಷ್ಟ ಸರ್ಕಾರ ವಿರುದ್ಧ ಜೆಡಿಎಸ್ ಪ್ರತಿಭಟನೆ

» ಚಿತ್ರದುರ್ಗ

ಕಾಂಗ್ರೆಸ್ ಸರ್ಕಾರದಲ್ಲಿನ ವಸತಿ ಸಚಿವ ಜಮೀರ್ ಆಹಮದ್‌ರವರನ್ನು ಸಚಿವ ಸಂಪುಟದಿಂದ ವಜಾ ಗೊಳಿಸುವಂತೆ ಆಗ್ರಹಿಸಿ ಚಿತ್ರದುರ್ಗ ಜಿಲ್ಲಾ ಜನತಾದಳ (ಜಾತ್ಯಾತೀತ) ಚಿತ್ರದುರ್ಗ ನಗರದಲ್ಲಿ ಬೀದಿ ಗೀಳಿದು ಹೋರಾಟ, ಪ್ರತಿಭಟನೆಯನ್ನು ನಡೆಸಿ ಜಿಲ್ಲಾಧಿಕಾರಿಗಳ ಮೂಲಕ ರಾಜ್ಯಪಾಲರಿಗೆ ಮನವಿಯನ್ನು ಸಲ್ಲಿಸಲಾಯಿತು.

ನಗರದ ಪ್ರವಾಸಿ ಮಂದಿರದಿಂದ ಜಿಲ್ಲಾಧಿಕಾರಿಗಳ ಕಚೇರಿಯವರೆಗೂ ಪ್ರತಿಭಟನೆಯನ್ನು ನಡೆಸಿದ ಜೆಡಿಎಸ್‌ನ ಪದಾಧಿಕಾರಿಗಳು, ಕಾರ್ಯಕರ್ತರು ಓನಕೆ ಓಬವ್ವ ಪ್ರತಿಮೆ ಮುಂಭಾಗದಲ್ಲಿ ಮಾನವ ಸರಪಳಿ ಯನ್ನು ನಿರ್ಮಾಣ ಮಾಡಿ ಕಾಂಗ್ರೆಸ್ ಸರ್ಕಾರ ಹಾಗೂ ಸಚಿವ ಜಮೀರ ಆಹಮದ್ ವಿರುದ್ಧ ಘೋಷಣೆ ಗಳನ್ನು ಕೂಗಲಾಯಿತು.




ಈ ಸಂದರ್ಭದಲ್ಲಿ ಮಾತನಾಡಿದ ರಾಜ್ಯ ಪ್ರಧಾನ ಕಾರ್ಯದರ್ಶಿ ಬಿ.ಕಾಂತರಾಜ್, ಬಡವರಿಗೆ ಮನೆಗಳನ್ನು ಹಂಚುವ ಸಮಯದಲ್ಲಿ ಅವರಿಂದ ಹಣವನ್ನು ಪಡೆಯುತ್ತಿರುವ ಭ್ರಷ್ಟ ಸಚಿವನಾದ ಜಮೀರ್ ಆಹ್ಮದ್ ರವರನ್ನು ಸಿದ್ದರಾಮಯ್ಯರವರು ತಮ್ಮ ಸಚಿವ ಸಂಪುಟದಿಂದ ವಜಾಗೊಳಿಸಬೇಕಿದೆ. ಇನ್ನೂ ಮುಂದಾದರೂ ಕಾಂಗ್ರೆಸ್ ಸರ್ಕಾರ ಬಡವರ ಪರವಾಗಿ ಕೆಲಸವನ್ನು ಮಾಡಬೇಕಿದೆ ಮತದಾರ ನಮಗೆ ಉತ್ತಮವಾದ ಸರ್ಕಾರವನ್ನು ನೀಡುತ್ತಾರೆ ಎಂಭ ಭರವಸೆಯ ಮೇರೆಗೆ ಕಾಂಗ್ರೆಸ್‌ಗೆ ಮತವನ್ನು ನೀಡಿದ್ದಾರೆ, ಆದರೆ ಕಾಂಗ್ರೆಸ್ ಮತದಾರರ ನಿರೀಕ್ಷೆಯನ್ನು ಹುಸಿಗೊಳಿಸುವದರ ಮೂಲಕ ಎಲ್ಲಡೆ ಭ್ರಷ್ಠಾಚಾರ ತುಂಬುವಂತೆ ಮಾಡಿದೆ, ಮುಂದಿನ ದಿನಮಾನದಲ್ಲಿ ಕಾಂಗ್ರೆಸ್‌ಗೆ ರಾಜ್ಯದಲ್ಲಿ 50 ಸ್ಥಾನವೂ ಸಹಾ ಬರುವುದಿಲ್ಲ ಎಂದು ಭವಿಷ್ಯ ನುಡಿದರು. ಚಿತ್ರದುರ್ಗ ಜಿಲ್ಲಾ ಜನತಾದಳ (ಜಾತ್ಯಾತೀತ)ದ ಜಿಲ್ಲಾಧ್ಯಕ್ಷರಾದ ಎಂ.ಜಯ್ಯಣ್ಣ ಮಾತನಾಡಿ, ರಾಜ್ಯದಲ್ಲಿ ಆಡಳಿತವನ್ನು ನಡೆಸುತ್ತಿರುವ ಕಾಂಗ್ರೆಸ್ ಪಕ್ಷದ ಸರ್ಕಾರದಲ್ಲಿ ನಡೆಯುತ್ತಿರುವ ಭ್ರಷ್ಠಾಚಾರದ ಬಗ್ಗೆ ಅವರ ಪಕ್ಷದ ಶಾಸಕರೇ ವಾಗ್ದಾಳಿಯನ್ನು ನಡೆಸಿದ್ದಾರೆ. ಬಡವರು ಮನೆಯನ್ನು ಪಡೆಯಲು ಲಂಚವನ್ನು ನೀಡಬೇಕು ಲಂಚವನ್ನು ನೀಡಿದರೆ ಮಾತ್ರ ಮನೆಯನ್ನು ನೀಡಲಾಗುತ್ತದೆ ಎಂದು ಹಿರಿಯ ಶಾಸಕರು ದೂರಿದ್ದಾರೆ ಇದರ ಬಗ್ಗೆ ರಾಜ್ಯದ ಮುಖ್ಯಮಂತ್ರಿ ಹಾಗೂ ಪಕ್ಷದ ಹೈಕಮಾಂಡಿಗೂ ಸಹಾ ಅದನ್ನೇ ಹೇಳಿದ್ದಾರೆ. ಪಕ್ಷದ ಶಾಸಕರೇ ಸಚಿವರ ಮೇಲೆ ಆರೋಪವನ್ನು ಮಾಡಿದ್ದಾರೆ. ಭ್ರಷ್ಠಾಚಾರವನ್ನು ಮಾಡಿರುವ ಬಗ್ಗೆ ತಿಳಿಸಿದ್ದಾರೆ, ಇವರನ್ನು ಸಚಿವ ಸಂಪುಟದಿಂದ ವಜಾ ಮಾಡುವಂತೆ ಆಗ್ರಹಿಸಿದರು.ರಾಜ್ಯದಲ್ಲಿ ಅಭೀವೃದ್ಧಿ ಕಾರ್ಯಗಳು ಕುಂಠಿತವಾಗಿದೆ ಅಭೀವೃದ್ಧಿಗೆ ಹಣ ಇಲ್ಲದೆ ಇದ್ದ ಹಣವನ್ನೆಲ್ಲಾ ತಮ್ಮ ಗ್ಯಾರೆಂಟಿಗಳಿಗೆ ನೀಡುವುದರ ಮೂಲಕ ಶಾಸಕರ ಅನುದಾನಕ್ಕೆ ಕತ್ತರಿಯನ್ನು ಹಾಕಿದ್ದಾರೆ. ಇದನ್ನು ಕಾಂಗ್ರೆಸ ಪಕ್ಷದ ಶಾಸಕರೇ ಹೇಳುತ್ತಿದ್ದಾರೆ, ಸರ್ಕಾರಕ್ಕೆ ಹಾಗೂ ಪಕ್ಷಕ್ಕೆ ಗೌರವ ತರಬೇಕಾದರೆ ಸಚಿವ ಜಮೀರ ಆಹಮದ್‌ರವರನ್ನು ಸಚಿವ ಸಂಪುಟದಿಂದ ಅಲ್ಲದೆ ಕಾಂಗ್ರೆಸ್ ಪಕ್ಷದಿಂದಲೇ ಉಚ್ಚಾಟನೆಯನ್ನು ಮಾಡುವಂತೆ ಒತ್ತಾಯಿಸಿದ್ದು, ಮತದಾರರು ನಿಮ್ಮ ಮಾತನ್ನು ನಂಬಿ 136 ಜನ ಶಾಸಕರನ್ನು ಆಯ್ಕೆ ಮಾಡಿದ್ದಾರೆ ಅದನ್ನು ಉಳಿಸಿಕೊಳ್ಳುವ ಕಾರ್ಯವನ್ನು ಮಾಡಬೇಕಿದೆ ಎಂದು ಕರೆ ನೀಡಿದರು.

ರಾಜ್ಯದಲ್ಲಿ ಸಾಕಷ್ಟು ಅಭೀವೃದ್ಧಿ ಕಾರ್ಯವನ್ನು ಮಾಡಬೇಕೆಂದು ಕೇಂದ್ರ ಸಚಿವರಾದ ಕುಮಾರಸ್ವಾಮಿ ಯವರು ಮುಂದಾಗಿದ್ದಾರೆ, ಆದರೆ ರಾಜ್ಯ ಸರ್ಕಾರ ಸಹಕಾರ ನಿಡುತ್ತಿಲ್ಲ ರಾಜ್ಯದಲ್ಲಿ ಬೃಹತ್ ಕೈಗಾರಿಕೆಗಳನ್ನು ಸ್ಥಾಪನೆ ಮಾಡುವುದರ ಮೂಲಕ ನಿರುದ್ಯೋಗವನ್ನು ಹೋಗಲಾಡಿಸುವ ಕಾರ್ಯವನ್ನು ಮಾಡಲು ಮುಂದಾದರೆ ಸಿದ್ದರಾಮಯ್ಯ ಸಹಕಾರವನ್ನು ನೀಡದೆ ತಿರಸ್ಕಾರ ಮಾಡುತ್ತಿದ್ದಾರೆ ಎಂದು ಆರೋಪಿಸಿದ ಅವರು, ನಮ್ಮ ಸರ್ಕಾರಕ್ಕೆ ಕೆಟ್ಟ ಹೆಸರು ಬರುತ್ತದೆ ಕುಮಾರಸ್ವಾಮಿಗೆ ಒಳ್ಳೆಯ ಹೆಸರು ಬರುತ್ತದೆ ಎಂಬ ಕಾರಣಕ್ಕೆ ಅನುಮತಿಯನ್ನು ನೀಡುತ್ತಿಲ್ಲ ಅಭೀವೃದ್ಧಿಯಲ್ಲಿ ರಾಜಕೀಯವನ್ನು ಬೆರಸಬೇಡಿ ಬಡ ಜನರ ಪರಿಸ್ಥಿತಿಯನ್ನು ಅರ್ಥ ಮಾಡಿಕೊಳ್ಳಿ ಎಂದು ಜಯ್ಯಣ್ಣ ತಿಳಿಸಿದರು.

ಈ ಪ್ರತಿಭಟನೆಯಲ್ಲಿ ಜೆಡಿಎಸ್‌,ನ ಮಾಜಿ ಜಿಲ್ಲಾಧ್ಯಕ್ಷರಾದ ಯಶೋಧರ್, ಜಿಲ್ಲಾ ಮಹಾ ಪ್ರಧಾನ ಕಾರ್ಯ ದರ್ಶಿ ಗೋಪಾಲಸ್ವಾಮಿ ನಾಯ್ಕ್, ಕಾರ್ಯಾದ್ಯಕ್ಷ ಜಿ.ಬಿ. ಶೇಖರ್, ಹಿರಿಯೂರು ಪರಾಜಿತ ಅಭ್ಯರ್ತಿ ರವಿಂದ್ರಪ್ಪ, ಮೊಳಕಾಲ್ಮೂರು ವೀರಭದ್ರಪ್ಪ, ತಾಲ್ಲೂಕು ಘಟಕದ ಅಧ್ಯಕ್ಷರಾದ ಸಣ್ಣ ತಿಮ್ಮಪ್ಪ, ಗಣೇಶ್ ಮೂರ್ತಿ,ಪರಮೇಶ್ವರಪ್ಪ,ಪಿಟಿತಿಪ್ಪೇಸ್ವಾಮಿ, ಕರಿಬಸಪ್ಪ, ಹನುಮಂತರಾಯಪ್ಪ, ಪಕ್ಷದ ಮುಖಂಡರಾದ ಚಿದಾನಂದ, ಶಂಕರಮೂರ್ತಿ, ಮಂಜುನಾಥ್, ಅಬ್ಬು, ನಗರಸಭಾ ಸ್ಥಾಯಿ ಸಮಿತಿ ಅಧ್ಯಕ್ಷ ನಸ್ರುಲ್ಲಾ ಸದಸ್ಯ ರಾದ ದೀಪು, ಮಾಜಿ ಸದಸ್ಯರಾದ ತಿಪ್ಪೇಸ್ವಾಮಿ, ಜಾಲಿಕಟ್ಟೆ ರುದ್ರಣ್ಣ, ಲಿಂಗರಾಜು ಸೇರಿದಂತೆ ಇತರರು ಭಾಗವಹಿಸಿದ್ದರು.

# ಫೋಕ್ಸೋ ಕೇಸ್ ವಿಚಾರಣೆ ಕೊನೆ ಹಂತಕ್ಕೆ: ಮುರುಘಾಶ್ರೀ ಹೇಳಿಕೆ ದಾಖಲಿಸಲು ದಿನಾಂಕ ನಿಗದಿ

» ಚಿತ್ರದುರ್ಗ

ಭಾರೀ ಸಂಚಲನ ಮೂಡಿಸಿದ್ದ ಚಿತ್ರದುರ್ಗದ ಡಾ ಶಿವಮೂರ್ತಿ ಮುರುಘಾ ಶರಣರ ವಿರುದ್ಧ ಫೋಕ್ಸೋ ಪ್ರಕರಣ ವಿಚಾರಣೆ ಕೊನೆ ಹಂತಕ್ಕೆ ಬಂದಿದೆ. ಅಪ್ರಾಪ್ತ ವಯಸ್ಸಿನ ಬಾಲಕಿಯರ ಮೇಲೆ ಲೈಂಗಿಕ ದೌರ್ಜನ್ಯ ಪ್ರಕರಣ ಎದುರಿಸುತ್ತಿರುವ ಪ್ರಕರಣದ ಎ–1 ಆರೋಪಿ ಚಿತ್ರದುರ್ಗ ಮುರುಘಾ ಶರಣರ ಸಾಕ್ಷ್ಯ ವಿಚಾರಣೆ ಪೂರ್ಣಗೊಂಡಿದ್ದು, ಇದೀಗ ಖುದ್ದು ಶಿವಮೂರ್ತಿ ಮುರುಘಾ ಶರಣರ ಹೇಳಿಕೆ ದಾಖಲಿಸಲು ದಿನಾಂಕ ನಿಗದಿ ಮಾಡಲಾಗಿದೆ.

ಅಪ್ರಾಪ್ತ ವಯಸ್ಸಿನ ಬಾಲಕಿಯರ ಮೇಲೆ ಲೈಂಗಿಕ ದೌರ್ಜನ್ಯ ಪ್ರಕರಣ (ಕಂಭಿಂ ಅಭಿಜ) ಎದುರಿಸುತ್ತಿರುವ ಚಿತ್ರದುರ್ಗದ ಡಾ ಶಿವಮೂರ್ತಿ ಮುರುಘಾ ಶರಣರ ವಿರುದ್ಧದ ಫೋಕ್ಸೋ ಪ್ರಕರಣ ವಿಚಾರಣೆ ಕೊನೆ ಹಂತಕ್ಕೆ ಬಂದಿದೆ. ಈ ಫೋಕ್ಸೋ ಪ್ರಕರಣ ಸಂಬಂಧ ಇಂದು (ಜೂನ್ 30) ಚಿತ್ರದುರ್ಗ 2ನೇ ಅಪರ



ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ವಿಚಾರಣೆ ನಡೆಸಿದ್ದು, ಶಿವಮೂರ್ತಿ ಮುರುಘಾ ಶರಣರ ಹೇಳಿಕೆಗೆ ಜುಲೈ 3ರಂದು ದಿನಾಂಕ ನಿಗದಿ ಮಾಡಿದ್ದು, ಮುರುಘಾಶ್ರೀ ಖುದ್ದಾಗಿ ಹಾಜರಾಗಿ ಹೇಳಿಕೆ ದಾಖಲಿಗೆ ಕೋರ್ಟ್ ಮಹತ್ವದ ಆದೇಶ ಹೊರಡಿಸಿದೆ. ಮುರುಘಾಶ್ರೀಗೆ ಶ್ರವಣದೋಷ ಹಿನ್ನೆಲೆಯಲ್ಲಿ ವಿಸಿ ಬದಲು ಖುದ್ದಾಗಿ ಬರಲು ಕೋರ್ಟ್ ಆದೇಶಿಸಿದೆ.

ಫೋಕ್ಸೋ ಪ್ರಕರಣದಲ್ಲಿ ಜೈಲಿನಲ್ಲಿದ್ದ ಮುರುಘಾಶ್ರೀಗೆ ಕರ್ನಾಟಕ ಹೈಕೋರ್ಟ್, ಈಗಾಗಲೇ ಷರತ್ತುಬದ್ಧ ಜಾಮೀನು ನೀಡಿದೆ. ಆದರೆ ಮುರುಘಾಶ್ರೀಗೆ ಚಿತ್ರದುರ್ಗ ಜಿಲ್ಲೆ ಪ್ರವೇಶಿಸಿದಂತೆ ಷರತ್ತು ವಿಧಿಸಿದೆ. ಇದೀಗ ವಿಡಿಯೋ ಕಾನ್ಫರೆನ್ಸ್ ಬದಲು ಖುದ್ದಾಗಿ ಬಂದು ಹೇಳಿಕೆ ದಾಖಲಿಸಲು ಕೋರ್ಟ್ ಜುಲೈ 3 ದಿನಾಂಕ ನಿಗದಿಪಡಿಸಿದೆ.

ಈ ಹಿಂದೆ ಹೈಕೋರ್ಟ್ ಮುರುಘಾಶ್ರೀಗೆ ಜಾಮೀನು ನೀಡಿತ್ತು. ಆದರೆ, ಸಾಕ್ಷ ವಿಚಾರಣೆ ನಡೆಸುವವರೆಗೆ ಬಂಧನದಲ್ಲಿಡಲು ಸುಪ್ರೀಂಕೋರ್ಟ್ ಆದೇಶಿಸಿತ್ತು. ಇದೀಗ, ಸಂತ್ರಸ್ತೆಯರಿಬ್ಬರು ಸೇರಿದಂತೆ 12 ಸಾಕ್ಷಿಗಳ ವಿಚಾರಣೆ ಪೂರ್ಣಗೊಂಡಿದೆ. ಈ ಹಿನ್ನೆಲೆಯಲ್ಲಿ ಹೈಕೋರ್ಟ್ ಜಾಮೀನಿನ ಆದೇಶದ ಪ್ರಕಾರ ಮುರುಘಾಶ್ರೀ ಜೈಲಿನಿಂದ ಬಿಡುಗಡೆಯಾಗಿದ್ದರು.

# ಆಹಾರ ಸುರಕ್ಷತಾ ಗುಣಮಟ್ಟ ಕಾಯ್ದೆಗಳ ಕುರಿತು ಮಾಹಿತಿ



**ಚಿತ್ರದುರ್ಗ:** ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆಯ ಜಿಲ್ಲಾ ಅಂಕಿತ ಅಧಿಕಾರಿ ಡಾ.ರಾಜಶೇಖರ್ ಪಾಳೇದರ್ ಹಾಗೂ ಆಹಾರ ಸುರಕ್ಷತೆ ಅಧಿಕಾರಿಗಳ ತಂಡ ಈಚೆಗೆ ಚಿತ್ರದುರ್ಗ ನಗರದ ವಿವಿಧೆಡೆ ಬೀದಿ ಬದಿ ವ್ಯಾಪಾರಿಗಳ ಸ್ಥಳಕ್ಕೆ ಭೇಟಿ ನೀಡಿ, ಆಹಾರ ಸುರಕ್ಷತೆ, ಆಹಾರ ತಯಾರಿಸುವ, ವಿತರಿಸುವ ರೀತಿ, ಉಪಯೋಗಿಸುವ ಸಾಮಗ್ರಿಗಳ ಬಳಕೆಯ ಬಗ್ಗೆ ಆಹಾರ ಸುರಕ್ಷತೆ ಕುರಿತು ಮಾಹಿತಿ ನೀಡಿದರು. ಚಿತ್ರದುರ್ಗ ತಾಲ್ಲೂಕಿನ ಆಹಾರ ಸುರಕ್ಷತಾ ಅಧಿಕಾರಿ ನಂದಿನಿ ಕಡಿ ಅವರು, ಬೀದಿಬದಿ ವ್ಯಾಪಾರಸ್ಥರಿಗೆ ಶುದ್ಧ ಕುಡಿಯುವ ನೀರು ಲಭ್ಯತೆ, ವೈಯಕ್ತಿಕ ಸ್ವಚ್ಛತೆ, ಪ್ಲಾಸ್ಟಿಕ್ ನಿರ್ಮೂಲನಾ ಬಗ್ಗೆ, ಟೆಸ್ಟಿಂಗ್ ಪೌಡರ್, ಕೃತಕ ಬಣ್ಣ, ನ್ಯೂಸ್ ಪೇಪರ್ ಬಳಕೆ ಮಾಡಬಾರದು ಎಂದು ಮಾಹಿತಿ ನೀಡಿದರು. ನಗರದ ಜಿಲ್ಲಾ ಆರೋಗ್ಯಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ತರಬೇತಿ ಕಾರ್ಯಕ್ರಮದಲ್ಲಿ ಜಿಲ್ಲಾ ಅಂಕಿತಾಧಿಕಾರಿ ಡಾ.ರಾಜಶೇಖರ್ ಪಾಳೇದರ್ ಮಾತನಾಡಿ ದರು. ಈ ಸಂದರ್ಭದಲ್ಲಿ ನಂದಿನಿ ಕಡಿ, ಮಂಜುನಾಥ್, ನಾಗೇಶ್ ಇದ್ದರು.

## ಪ್ರಮುಖ ಸುದ್ದಿ

# ಮೊಳಕಾಲ್ಮೂರು ಕ್ಷೇತ್ರದ ಅಭಿವೃದ್ಧಿ ನಿರ್ಲಕ್ಷ್ಯ: ಪ್ರತಿಭಟನೆ

» ಚಳ್ಳಕೆರೆ

ವಿವಿಧ ಬೇಡಿಕೆ ಈಡೇರಿಸುವಂತೆ ಒತ್ತಾಯಿಸಿ ಕರ್ನಾಟಕ ರಾಜ್ಯರೈತ ಸಂಘ ಹಾಗೂ ಹಸಿರು ಸೇನೆ ಹಿರಿಯ ಮುಖಂಡ ಬೇಡರೆಡ್ಡಿಹಳ್ಳಿ ಬಸವರೆಡ್ಡಿ ನೇತೃತ್ವದಲ್ಲಿ ರಾಷ್ಟ್ರೀಯ ಹೆದ್ದಾರಿ(150ಎ) ತಡೆದು ಪ್ರತಿಭಟನೆ ನಡೆಸಿ ತಹಶೀಲ್ದಾರ್‌ಗೆ ಮನವಿ ಅರ್ಪಿಸಿದರು.

ಈ ವೇಳೆ ಮಾತನಾಡಿದ ಅವರು, ಮೊಳಕಾಲ್ಮೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಹಿರೇಹಳ್ಳಿ,ಬೇಡರೆಡ್ಡಿಹಳ್ಳಿ,ತಳಕು, ಗೌರಸಮುದ್ರ ಮುಂತಾದ ಪ್ರದೇಶಗಳ ಸುತ್ತಮುತ್ತಲ ರಸ್ತೆಗಳು ಕಳೆದ ಹಲವಾರು ವರ್ಷಗಳಿಂದ ಡಾಂಬರೀಕರಣವಾಗದೆ ಸಂಪೂರ್ಣ ಹಾಳಾಗಿವೆ. ವಿಶೇಷವಾಗಿ



ವಿಶೇಷವಾಗಿ ಗೌರಸಮುದ್ರ ಮಾರಮ್ಮದೇವಿ ರಸ್ತೆ ಹದಗೆಟ್ಟಿದೆ. ಸರ್ಕಾರಿ ಅಧಿಕಾರಿಗಳು ನಿಗದಿಪಡಿಸಿದ ಕೇಂದ್ರಸ್ಥಾನದಲ್ಲಿರದೆ ದೂರದೂರುಗಳಿಂದ ಓಡಾಡುವುದರಿಂದ ಸಾರ್ವಜನಿಕರಿಗೆ ಸಮಸ್ಯೆಯಾಗುತ್ತಿದ್ದು, ರಸ್ತೆ ರಿಪೇರಿ ಹಾಗೂ ಅಧಿಕಾರಿಗಳು ಕೇಂದ್ರಸ್ಥಾನದಲ್ಲಿರುವಂತೆ ಸೂಚನೆ ನೀಡಬೇಕೆಂದು ಒತ್ತಾಯಿಸಿದರು.

ಮನವಿ ಸ್ವೀಕರಿಸಿ ಮಾತನಾಡಿದ ತಹಶೀಲ್ದಾರ್ ರೇಹಾನ್‌ಪಾಷ ರಸ್ತೆ ರಿಪೇರಿ ಹಾಗೂ ಇನ್ನಿತರ ಸೌಲಭ್ಯಗಳ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಲಾಗುವುದು ಗ್ರಾಮೀಣ ಭಾಗದ ಜನರಿಗೆ ಅಧಿಕಾರಿಗಳು ಸಕಾಲದಲ್ಲಿ ಸಿಗದೆ ತೊಂದರೆಯಾಗುತ್ತಿರುವ ಬಗ್ಗೆ ಮನವಿ ಮಾಡಿದ್ದು, ಈ ಬಗ್ಗೆ ಹಿರಿಯ ಅಧಿಕಾರಿಗಳಿಗೆ ಪತ್ರಬರೆದು ವ್ಯವಸ್ಥೆ ಸರಿಪಡಿಸುವಂತೆ ಮನವಿ ಮಾಡಲಾಗುವುದು ಎಂದರು.

ಡಿವೈಎಸ್ಪಿ ರಾಜಣ್ಣ, ಇಒ ಎಚ್.ಶಶಿಧರ, ಬಿಇಒ ಕೆ.ಎಸ್.ಸುರೇಶ್, ತಳಕು ಎಇಇ ಮಮತ, ರೈತ ಮುಖಂಡರಾದ ರವಿಕುಮಾರ್, ಎಸ್.ಆರ್.ತಿಪ್ಪೇಸ್ವಾಮಿ, ನರಸಿಂಹರೆಡ್ಡಿ, ಅಶೋಕ್, ಸತೀಶ್, ಗಂಗಾಧರ, ರಂಗಾರೆಡ್ಡಿ, ಹಿರೇಹಳ್ಳಿತಿಪ್ಪೇಸ್ವಾಮಿ, ರೇಷ್ಮೆಸಂಘದ ಅಧ್ಯಕ್ಷ ಬಿ.ವಿ.ತಿಪ್ಪೇಸ್ವಾಮಿ ಮುಂತಾದವರು ರಸ್ತೆತಡೆಯಲ್ಲಿ ಪಾಲ್ಗೊಂಡಿದ್ದರು.

## ಫಾಸ್ಟ್ ನ್ಯೂಸ್

### ಬಿ.ಎಸ್.ಪ್ರಭಾಕರ್ ನಿಧನ

» ದಾವಣಗೆರೆ



ನಗರದ ಎಸ್ ಎಸ್ ಲೇ ಔಟ್ ನಿವಾಸಿ ನಿವೃತ್ತ ಬ್ಯಾಂಕ್ ಅಧಿಕಾರಿ ಬಿ.ಎಸ್.ಪ್ರಭಾಕರ ಸೋಮವಾರ ನಿಧನರಾಗಿದ್ದಾರೆ. ಮೃತರು ಪತ್ನಿ, ಇಬ್ಬರು ಪುತ್ರಿಯರು, ಒಬ್ಬ ಪುತ್ರ ಸೇರಿದಂತೆ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ. ಅಂದು ಮಧ್ಯಾಹ್ನ ಸುಮಾರು ನಾಲ್ಕು ಗಂಟೆಗೆ ಗಾಂಧಿನಗರದ ಸಾರ್ವಜನಿಕ ರುದ್ರ ಭೂಮಿಯಲ್ಲಿ ಅಂತ್ಯಸಂಸ್ಕಾರ ನೆರವೇರಿಸಲಾಯಿತು ಎಂದು ಮೃತರ ಸಹೋದರ ನಿವೃತ್ತ ಹಿರಿಯ ಕೆಎಎಸ್ ಅಧಿಕಾರಿ ಬಿ.ಎಸ್.ಪುರುಷೋತ್ತಮ್ ತಿಳಿಸಿದರು.

### ಜುಲೈ 2ರಂದು ವಿದ್ಯುತ್ ಮಾರ್ಗ ಚೇತನ: ವಿದ್ಯುತ್ ಗೋಪುರ ಮುಟ್ಟದಂತೆ ಸೂಚನೆ

» ಚಿತ್ರದುರ್ಗ

ಕರ್ನಾಟಕ ವಿದ್ಯುತ್ ಪ್ರಸರಣ ನಿಗಮವು ಚಿತ್ರದುರ್ಗ ತಾಲ್ಲೂಕಿನ ಚಿತ್ರದುರ್ಗದಲ್ಲಿ ಚಿತ್ರದುರ್ಗದ 66/11 ಕೆ.ವಿ. ಹೆಚ್.ಡಿ.ಪುರ ವಿದ್ಯುತ್ ಉಪ-ಕೇಂದ್ರದಿಂದ ಹಾಲಿ ಇರುವ 66 ಕೆವಿ ಹೊಳಲ್ಕೆರೆ-ಪಂಡರಹಳ್ಳಿ ವಿದ್ಯುತ್ ಮಾರ್ಗದ ಟ್ಯಾಪ್ ಪಾಯಿಂಟ್‌ವರೆಗೆ ಹಾಲಿ ಇರುವ 66ಕೆವಿ ಸಿಂಗಲ್ ಸರ್ಕ್ಯೂಟ್ ಮಾರ್ಗದ ಮೊಗಸಾಲೆಯಲ್ಲಿ 9.163 ಕಿ.ಮೀ ಉದ್ದದ ಉದ್ದೇಶಿತ 66 ಕೆವಿ ಜೋಡಿ ಪ್ರಸರಣ ಮಾರ್ಗದ ಕಾಮಗಾರಿಯು ಮುಕ್ತಾಯಗೊಂಡಿರುತ್ತದೆ. ಈ 66 ಕೆ.ವಿ ವಿದ್ಯುತ್ ಮಾರ್ಗವನ್ನು 2025ರ ಜುಲೈ 02ರಂದು ಅಥವಾ ತದನಂತರ ಚೇತನಗೊಳಿಸುವುದರಿಂದ ಈ 66 ಕೆವಿ ಪ್ರಸರಣ ಮಾರ್ಗದ ವಿದ್ಯುತ್ ಗೋಪುರಗಳನ್ನು ಸಾರ್ವಜನಿಕರು ಮುಟ್ಟುವುದಾಗಲಿ, ಹತ್ತುವುದಾಗಲಿ, ಮರದ ರೆಂಬೆ, ಲೋಹದ ತಂತಿಗಳನ್ನು ಹಾಗೂ ಇತರೆ ಯಾವುದೇ ವಸ್ತುಗಳನ್ನು ಮಾರ್ಗದ ಮೇಲೆ ಎಸೆಯುವುದಾಗಲಿ ಮತ್ತು ವಿದ್ಯುತ್ ಗೋಪುರಗಳಿಗೆ ಜಾನುವಾರುಗಳನ್ನು ಕಟ್ಟುವುದಾಗಲಿ ಮಾಡಬಾರದು ಎಂದು ಸಾರ್ವಜನಿಕರಿಗೆ ಎಚ್ಚರಿಕೆ ನೀಡಲಾಗಿದೆ. ಈ ಮಾರ್ಗದ ಮೊಗಸಾಲೆಯಲ್ಲಿ ಅಪಾಯದ ಮಟ್ಟದಲ್ಲಿ ಇರುವ ಮರಗಳನ್ನು ಸುರಕ್ಷತೆಯ ದೃಷ್ಠಿಯಿಂದ ಭೂ ಮಾಲೀಕರು ಕೂಡಲೇ ಮಾರ್ಗದ ಮೊಗಸಾಲೆಯಲ್ಲಿರುವ ಮರಗಳನ್ನು ಕಡಿದು ಹಾಕಲು ಅನುಮತಿ ನೀಡಬೇಕು. ಒಂದು ವೇಳೆ ಈ ಸೂಚನೆಯನ್ನು ಉಲ್ಲಂಘಿಸಿದಲ್ಲಿ ಈ ಮಾರ್ಗದಿಂದ ಸಾರ್ವಜನಿಕರಿಗೆ ಆಗುವ ಹಾನಿ, ತೊಂದರೆ, ಅಪಘಾತಗಳಿಗೆ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮವು ಜವಾಬ್ದಾರಿಯಾಗಿರುವುದಿಲ್ಲ. ವಿದ್ಯುತ್ ಮಾರ್ಗ ಹಾದುಹೋಗುವ ಪ್ರದೇಶಗಳು: ಚಿತ್ರಹಳ್ಳಿ, ಈಚಘಟ್ಟ, ಹೆಚ್.ಡಿ.ಪುರ, ನಗರಘಟ್ಟ, ನೆಲ್ಲಿಕಟ್ಟೆ ಮತ್ತು ಮತ್ತಿಘಟ್ಟ ಗ್ರಾಮಗಳ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ಮಾರ್ಗ ಹಾದು ಹೋಗಲಿದೆ ಎಂದು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ಬೃಹತ್ ಕಾಮಗಾರಿ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಆಕಾಶವಾಣಿ: ಅರೆಕಾಲಿಕ ವರದಿಗಾರ ಹುದ್ದೆಗಳಿಗೆ ಅರ್ಜಿ ಅಹ್ವಾನ




» ಚಿತ್ರದುರ್ಗ

ಆಕಾಶವಾಣಿ ಬೆಂಗಳೂರು ಕೇಂದ್ರದ ಪ್ರಾದೇಶಿಕ ಸುದ್ದಿ ವಿಭಾಗವು ಚಿತ್ರದುರ್ಗ ಮತ್ತು ಚಾಮರಾಜನಗರ ಜಿಲ್ಲೆಗಳ ಅರೆಕಾಲಿಕ ವರದಿಗಾರರ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಪತ್ರಿಕೋದ್ಯಮದಲ್ಲಿ ಸ್ನಾತಕೋತ್ತರ ಡಿಪ್ಲೊಮಾ, ಪತ್ರಿಕೋದ್ಯಮ, ಸಮೂಹ ಮಾಧ್ಯಮದಲ್ಲಿ ಪದವಿ ಅಥವಾ ಯಾವುದೇ ಪದವಿಯೊಂದಿಗೆ ಮಾಧ್ಯಮದಲ್ಲಿ ಎರಡು ವರ್ಷಗಳ ಅನುಭವ, ಅರ್ಜಿ ಸಲ್ಲಿಸುವ ಕೊನೆಯ ದಿನಕ್ಕೆ ವಯೋಮಿತಿ 24 ರಿಂದ 50 ವರ್ಷದೊಳಗಿರಬೇಕು. ಅರ್ಜಿದಾರರು ಅರ್ಜಿ ಸಲ್ಲಿಸುವ ಜಿಲ್ಲೆಯ ಜಿಲ್ಲಾ ಕೇಂದ್ರದ ನಿವಾಸಿಯಾಗಿರಬೇಕು ಅಥವಾ ಕೇಂದ್ರದಿಂದ 10 ಕಿ.ಮೀ ಒಳಗಿನ ನಿವಾಸಿಯಾಗಿರಬೇಕು. ಕಂಪ್ಯೂಟರ್ ಮತ್ತು ವರ್ಡ್ ಪ್ರಾಸೆಸಿಂಗ್‌ನಲ್ಲಿ ಜ್ಞಾನ ಹೊಂದಿರಬೇಕು. ಸುದ್ದಿ ಸಂಗ್ರಹಕ್ಕೆ ಬೇಕಾದ ಉಪಕರಣಗಳನ್ನು ಹೊಂದಿರಬೇಕು. ವಿದ್ಯುನ್ಮಾನ ಮಾಧ್ಯಮಗಳಲ್ಲಿ ಕೆಲಸ ಮಾಡಿದ ಅನುಭವ ಹೊಂದಿದವರಿಗೆ ಆದ್ಯತೆ ನೀಡಲಾಗುವುದು. ಆಸಕ್ತ ಅಭ್ಯರ್ಥಿಗಳು ಪೂರ್ಣ ವಿವರಗಳು, ಅಗತ್ಯ ದಾಖಲಾತಿಗಳ ಪ್ರತಿಗಳು ಒಳಗೊಂಡ ಅರ್ಜಿಗಳನ್ನು ರಿಜಿಸ್ಟರ್ಡ್ ಅಂಚೆ ಮೂಲಕ ಅಥವಾ ಖುದ್ದಾಗಿ ಜುಲೈ 31 ರೊಳಗಾಗಿ ತಲುಪುವಂತೆ The Deputy Director General (E), (Attn: Regional News Unit) Akshvani, Raj Bhavan Road, Bengaluru 560001, ಕಳಿಸಬೇಕು. ಹೆಚ್ಚಿನ ಮಾಹಿತಿಗಾಗಿ 080-22356344 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

# ಯಾರು ಸಹ ತಿನ್ನುವ ಅನ್ನಕ್ಕೆ, ಕುಡಿಯುವ ನೀರಿಗೆ ಅಡ್ಡಿಪಡಿಸುವುದು ಅಕ್ಷಮ್ಯ ಅಪರಾಧ: ಕಾರಜೋಳ

» ಚಿತ್ರದುರ್ಗ



ಕಳೆದ ಕೆಲವು ದಿನಗಳಿಂದ ದಾವಣಗೆರೆಯಲ್ಲಿ ಕೆಲವು ಮುಖಂಡರು ಚಿತ್ರದುರ್ಗ ಜಿಲ್ಲೆಗೆ ಕುಡಿಯುವ ನೀರನ್ನು ಕೊಡಬಾರದೆಂದು ಹೋರಾಟ ಮಾಡುತ್ತಿದ್ದಾರೆ.ಯಾರು ಸಹ ತಿನ್ನುವ ಅನ್ನಕ್ಕೆ, ಕುಡಿಯುವ ನೀರಿಗೆ ಅಡ್ಡಿಪಡಿಸುವುದು ಅಕ್ಷಮ್ಯ ಅಪರಾಧ ಅದನ್ನು ತೀವ್ರವಾಗಿ ಖಂಡಿಸುತ್ತೇನೆ ಎಂದು ಮಾಜಿ ಉಪ ಮುಖ್ಯಮಂತ್ರಿಗಳು ಹಾಗೂ ಸಂಸದರಾದ ಗೋವಿಂದ ಕಾರಜೋಳ ತಿಳಿಸಿದ್ದಾರೆ.

ಚಿತ್ರದುರ್ಗ ನಗರದ ಬಿಜೆಪಿ ಪಕ್ಷದ ಕಛೇರಿಯಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಸಂವಿಧಾನವು ಅನ್ನಕ್ಕೆ, ನೀರಿಗೆ ಬೇಲಿ ಹಾಕಿಲ್ಲ.. ನಾನು ವಿನಂತಿಮಾಡುತ್ತೇನೆಯಾವುದೇಕಾರಣಕ್ಕೂ ಈಗಾಗಲೇ ಪೂರ್ಣಗೊಂಡಿರುವ ಯೋಜನೆಯನ್ನು ನಿಲ್ಲಿಸಬಾರದು. ಚಿತ್ರದುರ್ಗ ಹಾಗೂ ಚಿಕ್ಕಮಗಳೂರು ಜಿಲ್ಲೆಗೆ ಕುಡಿಯುವ ನೀರನ್ನು ಒದಗಿಸುವ ಸಲುವಾಗಿ 800 ಕೋಟಿ ರೂ ವೆಚ್ಚದಲ್ಲಿ ನಮ್ಮ ಪಕ್ಷದ ಸರ್ಕಾರ ಅಧಿಕಾರದಲ್ಲಿದ್ದಾಗ ಯೋಜನೆ ರೂಪಿಸಿ ಹಣ ಬಿಡುಗಡೆ ಮಾಡಿದ ಯೋಜನೆ.ಈ ಯೋಜನೆಯನ್ನು ಉದ್ಘಾಟನೆ ಮಾಡಿ ನೀರು ಒದಗಿಸಬೇಕು ಆದರೆ ಇದಕ್ಕೆ ಅಡ್ಡಿಪಡಿಸುವುದು ಎಷ್ಟು ಸೂಕ್ತ.ಸುಪ್ರೀಂ ಕೋರ್ಟ್ ಕುಡಿಯುವ ನೀರು ಒದಗಿಸುವ ಬಗ್ಗೆ ಹಲವು ಆದೇಶವನ್ನು ಮಾಡಿದೆ.. ಇದಕ್ಕೆ ಏರಿಯಾ ಮಿತಿಯಿಲ್ಲ ಎಂದರು.

ಕೃಷ್ಣಾ ನದಿಯಿಂದ ಮಹಾರಾಷ್ಟ್ರಕ್ಕೆ ಕುಡಿಯುವ ನೀರನ್ನು ಕೊಟ್ಟಿದ್ದೇವೆ.. ಹಾಗೆಯೇ ನಮ್ಮಲ್ಲಿ ಕೃಷ್ಣಾ ಭೀಮ ನದಿ ಒಣಗಿದಾಗ ಮಹಾರಾಷ್ಟ್ರದಿಂದ ಕುಡಿಯುವ ನೀರು ಕೊಡುತ್ತಾರೆ.ಚಿತ್ರದುರ್ಗ - ದಾವಣಗೆರೆ ಜಗಳ ಪಾಕಿಸ್ತಾನ ಹಿಂದುಸ್ತಾನ ಜಗಳವಲ್ಲಈಗಾಗಲೇ ಕಾಮಗಾರಿ ಪೂರ್ಣಗೊಂಡಿದ್ದು ಟ್ರಯಲ್ ರನ್ ಮಾಡುತ್ತಿದ್ದಾರೆ.. ಟ್ರಯಲ್ ರಂದು ಮಾಡಿ ನೀರು ಹರಿಸಬೇಕು.. ಮಾನ್ಯ ಮುಖ್ಯಮಂತ್ರಿ ಸ್ವತಃ ಯೋಜನೆಯನ್ನು ಲೋಕಾರ್ಪಣೆ ಮಾಡಬೇಕೆಂದು ಆಗ್ರಹಿಸುತ್ತೇನೆ


ಆರ್ ಎಸ್ ಎಸ್ ಮುಖಂಡ ದತ್ತಾತ್ರೇಯ ಹೊಸಬಾಳೆ ಹೇಳಿಕೆ ವಿಚಾರಕ್ಕೆ ಪ್ರತಿಕ್ರಿಯಿಸಿ ಸಂವಿಧಾನ ಪೀಠಿಕೆಯಲ್ಲಿ ಸಮಾಜವಾದ, ಜಾತ್ಯಾತೀತ ಪದ ವಿಚಾರ..1975ರಲ್ಲಿ ಪ್ರಧಾನಿ ಇಂದಿರಾ ತುರ್ತು ಪರಿಸ್ಥಿತಿ ಜಾರಿ ಮಾಡಿದ್ದರು..ಸಂವಿಧಾನಅಮಾನತ್ತಿನಲ್ಲಿಟ್ಟು ಅನೇಕರನ್ನು ಜೈಲಲ್ಲಿಟ್ಟಿದ.ಮಲ್ಲಿಕಾರ್ಜುನ ಖರ್ಗೆ, ರಾಹುಲ್ ಗಾಂಧಿ, ಪ್ರಿಯಾಂಕಾ ಗಾಂಧಿ, ಸಿದ್ಧರಾಮಯ್ಯ ಕ್ಷಮೆ ಕೇಳಬೇಕು. ಅಂಬೇಡ್ಕರ್ ಅವರೇ ತಿರಸ್ಕರಿಸಿದ್ದನ್ನು ತುರ್ತು ಪರಿಸ್ಥಿತಿ ಕಾಲದಲ್ಲಿ ಸೇರಿಸಿದ್ದಾರೆ.. ಹೊಸಬಾಳೆ ಅವರು ದೇಶದ ಜನತೆಗೆ ಚರ್ಚೆಗೆ ಬಿಟ್ಟಿದ್ದಾರೆ.. ಕಾಂಗ್ರೆಸ್ ಅಂಬೇಡ್ಕರ್, ಸಂವಿಧಾನಕ್ಕೆ ಗೌರವ ನೀಡಿಲ್ಲ..ಸಂವಿಧಾನ ಅಮಾನತ್ತಿನಲ್ಲಿಟ್ಟು ವಿಕಾರಗೊಳಿಸಿದ ಕಾಂಗ್ರೆಸ್ ಪಕ್ಷ.. ಕ್ಷಮೆ ಕೇಳಬೇಕು ಎಂದರು.

ಪತ್ರಿಕಾ ಗೋಷ್ಟಿಯಲ್ಲಿ ವಿಧಾನ ಪರಿಷತ್ ಸದಸ್ಯರಾದ ಕೆ.ಎಸ್. ನವೀನ್, ಜಿಲ್ಲಾಧ್ಯಕ್ಷ ಕೆ.ಟಿ.ಕುಮಾರಸ್ವಾಮಿ, ಮಾಜಿ ಶಾಸಕ ಎಸ್. ಕೆ.ಬಸವರಾಜನ್, ಪ್ರಧಾನ ಕಾರ್ಯದರ್ಶಿ ಸಂಪತ್ ಕುಮಾರ್, ಖಂಜಾಚಿ ಮಾಧುರಿ ಗೀರೀಶ್, ವಕ್ತಾರ ನಾಗರಾಜ್ ಬೇದ್ರೇ, ಹೊಸದುರ್ಗ ಪುರಸಭೆಯ ಉಪಾಧ್ಯಕ್ಷರಾಧ ಗೀರಿಜ, ರಾಜೇಶ್ವರಿ ಆನಂದ್, ನಗರಾಧ್ಯಕ್ಷ ಲೋಕೇಶ್, ಗ್ರಾಮಾಂತರ ಅಧ್ಯಕ್ಷ ನಾಗರಾಜ್, ಜಿ.ಪಂ.ಮಾಜಿ ಸದಸ್ಯ ಗುರುಸ್ವಾಮಿ ಭಾಗವಹಿಸಿದ್ದರು.

ಪತ್ರಿಕಾಗೋಷ್ಟಿಯ ನಂತರ ಸಂಸದ ಗೋವಿಂದ ಕಾರಜೋಳರವರು ಮಾಧ್ಯಮ ದವರೊಂದಿಗೆ ಮಾತನಾಡಿ ಡಿಸೆಂಬರ್ ವೇಳೆಗೆ ರಾಜ್ಯ ಕಾಂಗ್ರೆಸ್ ಸರ್ಕಾರ ಪತನವಾಗಲಿದೆ ರಾಜ್ಯ ಕಾಂಗ್ರೆಸ್ ಪಕ್ಷದಲ್ಲಿ ಮೂರು ಗುಂಪುಗಳಾಗಿ ಸಿಎಂ ಸ್ಥಾನಕ್ಕಾಗಿ ರಣಹದ್ದಿನಂತೆ ಕಚ್ಚಾಡುತ್ತಿದ್ದಾರೆ. ದಲಿತ ಸಿಎಂಗಾಗಿ ಪರಮೇಶ್ವರ್, ಖರ್ಗೆ, ಮಹಾದೇವಪ್ಪ, ಮುನಿಯಪ್ಪ ಗುಂಪಿನ ಪೈಪೋಟಿವೀರಶೈವ ಲಿಂಗಾಯತ ಸಿಎಂಗಾಗಿ ಶಾಮನೂರು, ಬಿ ಆರ್ ಪಾಟೀಲ್, ಶಿವಗಂಗಾ ಬಸವರಾಜ್ ಹೋರಾಟ.ಸಿದ್ಧರಾಮಯ್ಯ ಮುಂದುವರಿಕೆ ಬಗ್ಗೆ ಅನೇಕ ಹಿಂದುಳಿದ ಗುಂಪಿನವರು ( ಕೆ ಎನ್ ರಾಜಣ್ಣ, ಯತೀಂದ್ರ) ಹೇಳಿದ್ದಾರೆ ಮೂರು ಗುಂಪಿನ ಬಡಿದಾಟದಲ್ಲಿ ಡಿಕೆಶಿ ಕಳೆದು ಹೋಗಿದ್ದಾರೆ. ಅನುದಾನ ಸಿಕ್ಕಿಲ್ಲವೆಂದು 42ಶಾಸಕರಿಂದ ಹೈಕಮಾಂಡ್‌ಗೆ ದೂರು ನೀಡಿದ್ದಾರೆ.ಸುರ್ಜೆವಾಲಾ ಅಹವಾಲು ಕೇಳಿ ಕೇಂದ್ರಕ್ಕೆ ವರದಿ ನೀಡಲಿದ್ದಾರೆಸಿದ್ಧರಾಮಯ್ಯಗೆಆಡಳಿತದಲ್ಲಿ ಮೊದಲಿದ್ದ ಹಿಡಿತ ಈಗಿಲ್ಲ ಕಾಂಗ್ರೆಸ್ ಹೈಕಮಾಂಡ್ ನಿತ್ಯ ಕಪ್ಪು ಕಾಣಿಕೆಗೆ ಕಿರುಕುಳ ನೀಡುತ್ತಿದೆ.ಸೋನಿಯಾ, ರಾಹುಲ್, ಪ್ರಿಯಾಂಕಾರಿಂದ ನಿತ್ಯ ಕಿರುಕುಳ ನೀಡುತ್ತಿದ್ದಾರೆ. ಕಿರುಕುಳ ನಿಯಂತ್ರಿಸುವ ಶಕ್ತಿ ಮಲ್ಲಿಕಾರ್ಜುನ ಖರ್ಗೆ ಅವರಿಗಿಲ್ಲಕಾಂಗ್ರೆಸ್ ಪಕ್ಷ ಈಗ ದಾರಿ ತಪ್ಪಿದ ಮಗನಂತೆ ಆಗಿದೆ ಹಾಲು ಕುಡಿದು ಸಾಯುವವರಿಗೆ ವಿಷ ಹಾಕಿ ಕೆಟ್ಟ ಹೆಸರು ಪಡೆಯಲ್ಲ ನಾವು ಎಂದರು

# ಪ್ರಾಂಶುಪಾಲ ಅನಂತರಾಮುಗೆ ಬೀಳ್ಕೊಡುಗೆ

» ಚಿತ್ರದುರ್ಗ




ಸಂಸ್ಥೆ ನಿಮಗೆ ವಹಿಸಿರುವ ಕೆಲಸವನ್ನು ಅಚ್ಚುಕಟ್ಟಾಗಿ ನಿಭಾಯಿಸಿ ನಗು ನಗುತ ಜೀವಿಸಿ ಮತ್ತೊಬ್ಬರ ಬಗ್ಗೆ ಟೀಕೆ ಮಾಡುವುದನ್ನು ಬಿಟ್ಟು ಉತ್ತಮ ಆರೋಗ್ಯ ಕಾಪಾಡಿಕೊಳ್ಳಿ ಎಂದು ದೇವರಾಜ್ ಅರಸ್ ಶಿಕ್ಷಣ ಸಂಸ್ಥೆಯ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಎಂ.ಸಿ. ರಘುಚಂದನ್ ಸಿಬ್ಬಂದಿಗಳಿಗೆ ಕರೆ ನೀಡಿದರು.

ದೇವರಾಜ್ ಅರಸ್ ಶಿಕ್ಷಣ ಸಂಸ್ಥೆಯ ವೆಂಕಟೇಶ್ವರ ಶಿಕ್ಷಣ ಮಹಾವಿದ್ಯಾಲಯದ ಪ್ರಾಂಶುಪಾಲರಾಗಿ ಸೇವೆ ಸಲ್ಲಿಸಿ ನಿವೃತ್ತಿಯಾದ ಡಾ.ಅನಂತರಾಮು ಹಾಗೂ ಎಂ.ಎಂ. ಪ್ರೌಢಶಾಲೆ ಮುಖ್ಯ ಶಿಕ್ಷಕರಾಗಿ ಕರ್ತವ್ಯ ನಿರ್ವಹಿಸಿ ವಯೋ ನಿವೃತ್ತಿ ಹೊಂದಿದ ಪಾಪಣ್ಣ ಇವರುಗಳಿಗೆ ಸೋಮವಾರ ಹಮ್ಮಿಕೊಳ್ಳಲಾಗಿದ್ದ ಬೀಳ್ಕೊಡುಗೆ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು.

ದೇವರಾಜ್ ಅರಸ್ ಶಿಕ್ಷಣ ಸಂಸ್ಥೆ ಹೆಮ್ಮರವಾಗಿ ಬೆಳೆದು ನಿಂತಿದೆಯೆಂದರೆ ಅದಕ್ಕೆ ವೆಂಕಟೇಶ್ವರ ಶಿಕ್ಷಣ ಮಹಾವಿದ್ಯಾಲಯ ಕಾರಣ. ದೇಹಕ್ಕೆ ವಯಸ್ಸಾಗಬಹುದು. ಆದರೆ ಮನಸ್ಸಿಗೆ ಎಂದಿಗೂ ವಯಸ್ಸಾಗುವುದಿಲ್ಲ. ವೃತ್ತಿಯಲ್ಲಿರುವವರು ನಿವೃತ್ತಿಯಾಗಲೇಬೇಕು. ಒಬ್ಬ ವ್ಯಕ್ತಿಯ ವ್ಯಕ್ತಿತ್ವವನ್ನು ಮನಸ್ಸಿನಿಂದ ಅಳೆಯಬೇಕು. ರೂಪ, ಧರಿಸಿರುವ ಬಟ್ಟೆಯಿಂದಲ್ಲ. ಮತ್ತೊಬ್ಬರ ಬಗ್ಗೆ ಎಂದಿಗೂ ಹಗುರುವಾಗಿ ಮಾತನಾಡಬೇಡಿ. ಕೆಟ್ಟ ಆಲೋಚನೆಯಿಂದ ದೂರವಿದ್ದು, ಸಧೃಢ ಆರೋಗ್ಯ ಕಾಪಾಡಿಕೊಳ್ಳಿ ಎಂದು ಸಲಹೆ ನೀಡಿದರು.

ದಾವಣಗೆರೆ ವಿಶ್ವವಿದ್ಯಾನಿಲಯದ ವಿಶ್ರಾಂತ ಪ್ರಾಧ್ಯಾಪಕ ಡಾ.ಹೆಚ್.ವಿ.ವಾಮದೇವಪ್ಪ ಮಾತನಾಡಿ ಗುರುವಿಗೆ ಮಹತ್ವದಾದ ಸ್ಥಾನವಿದೆ. ಮಕ್ಕಳ ಭವಿಷ್ಯ ಶಿಕ್ಷಕರುಗಳ ಮೇಲೆ ನಿಂತಿದೆ. ಬ್ರಿಟೀಷರಿಗೆ ಇಂಗ್ಲಿಷ್ ವ್ಯಾಕರಣ ಕಲಿಸಿದ್ದು, ಭಾರತೀಯ ಶಿಕ್ಷಕರು. ಅಂತಹ ಪಾಂಡಿತ್ಯ ನಮ್ಮ ಶಿಕ್ಷಕರುಗಳಲ್ಲಿದೆ. ಪ್ರಾಚೀನ ಕಾಲದಿಂದಲೂ ಗುರು-ಶಿಷ್ಯರ ಬಾಂಧವ್ಯ ನೋಡುತ್ತಿದ್ದೇವೆ. ದ್ರೋಣಾಚಾರ್ಯರಿಗೆ ಶಿಷ್ಯ ಏಕಲವ್ಯ ಹೆಬ್ಬೆರಳನ್ನು ಕತ್ತರಿಸಿ ನೀಡಿದ ಉದಾಹರಣೆಯಿದೆ. ಯಾರು ಎಷ್ಟೆ ದೊಡ್ಡ ಸ್ಥಾನ ಅಲಂಕರಿಸಿದರೂ ಅದರ ಹಿಂದೆ ಗುರುವಿನ ಮಾರ್ಗದರ್ಶನವಿರುತ್ತದೆ ಎಂದು ಹೇಳಿದರು.ಶಿಷ್ಯ ತನಗಿಂತ ಎತ್ತರಕ್ಕೆ ಬೆಳೆದಾಗ ಮಾತ್ರ ಗುರುವಿಗೆ ಖುಷಿಯಾಗುತ್ತದೆ. ಬಡತನವಿರುವ ಕಾರಣಕ್ಕಾಗಿ ಯಾವುದೇ ವಿದ್ಯಾರ್ಥಿಗಳನ್ನು ತಿರಸ್ಕರಿಸಬಾರದು. ಎಲ್ಲರಲ್ಲಿಯೂ ಒಂದಲ್ಲ ಒಂದು ರೀತಿಯ ಪ್ರತಿಭೆಯಿರುತ್ತದೆ. ಗುರುತಿಸಿ ಪ್ರೋತ್ಸಾಹಿಸುವ ಜವಾಬ್ದಾರಿ ಶಿಕ್ಷಕರುಗಳ ಮೇಲಿದೆ ಎಂದರು.

ದಾವಣಗೆರೆ ವಿಶ್ವವಿದ್ಯಾನಿಲಯದ ಶಿಕ್ಷಣ ನಿಕಾಯ ಮುಖ್ಯಸ್ಥ ಡಾ.ಕೆ.ವೆಂಕಟೇಶ್, ಕೆ.ರುದ್ರಮುನಿ, ಗೋವಿಂದರಾಜು, ನಾಗಭೂಷಣ್‌ಶೆಟ್ಟಿ, ದೇವರಾಜ್ ಅರಸ್ ಶಿಕ್ಷಣ ಸಂಸ್ಥೆಯ ಎಲ್ಲಾ ಪ್ರಾಂಶುಪಾಲರುಗಳು, ಬೋಧಕ-ಬೋಧಕೇತರ ವರ್ಗದವರು ಮತ್ತು ವಿದ್ಯಾರ್ಥಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

## ಡಾ.ಪಾಲಾಕ್ಷಪ್ಪ ಹೇಮರಡ್ಡಿ ಮಲ್ಲಮ್ಮ ಸಮಾಜದ ನೂತನ ಅಧ್ಯಕ್ಷ



**ಚಿತ್ರದುರ್ಗ** : ಜಿಲ್ಲಾ ವೀರಶೈವ ಲಿಂಗಾಯಿತ ಹೇಮರಡ್ಡಿ ಮಲ್ಲಮ್ಮ ಸಮಾಜದ ನೂತನ ಅಧ್ಯಕ್ಷರಾಗಿ ಬಸವೇಶ್ವರ ಆಸ್ಪತ್ರೆಯ ಡಾ.ಪಾಲಾಕ್ಷಪ್ಪ ಇವರನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಗಿದೆ.ಇದುವರೆವಿಗೂ ಅಧ್ಯಕ್ಷರಾಗಿದ್ದ ಜಿ.ಚಿದಾನಂದಪ್ಪನವರು ವೈಯಕ್ತಿಕ ಕಾರಣಗಳಿಂದ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿರುವುದರಿಂದ ಡಾ.ಪಾಲಾಕ್ಷಪ್ಪನವರು ನೂತನ ಅಧ್ಯಕ್ಷರಾಗಿ ಆಯ್ಕೆಯಾಗಿದ್ದಾರೆಂದು ಜಿಲ್ಲಾ ವೀರಶೈವ ಲಿಂಗಾಯಿತ ಹೇಮರಡ್ಡಿ ಮಲ್ಲಮ್ಮ ಸಮಾಜದ ಕಾರ್ಯದರ್ಶಿ ಡಿ.ಟಿ.ಶಿವಾನಂದಪ್ಪ ತಿಳಿಸಿದ್ದಾರೆ. ನೂತನ ಅಧ್ಯಕ್ಷ ಡಾ.ಪಾಲಾಕ್ಷಪ್ಪನವರನ್ನು ಅಭಿನಂದಿಸಿದ ಸಂದರ್ಭದಲ್ಲಿ ನ್ಯಾಯವಾದಿ ವಿಶ್ವನಾಥ್, ಖಜಾಂಚಿ ದಯಾನಂದ ಪಾಟೀಲ್, ನಿವೃತ್ತ ಇಂಜಿನಿಯರ್ ಬಸವರಾಜ್ ಇವರುಗಳು ಹಾಜರಿದ್ದರು.



**ಚಿತ್ರದುರ್ಗ ಕಲ್ಯಾಣ ಕರ್ನಾಟಕ ವೇದಿಕೆ ಜಿಲ್ಲಾ ಶಾಖೆಯಿಂದ ಹೊಸದುರ್ಗದಲ್ಲಿ ಡಾ.ಪುನಿತ್‌ರಾಜ್‌ಕುಮಾರ್ ಪುಣ್ಯಸ್ಮರಣೆ ಪ್ರಯುಕ್ತ ರೋಟರಿ ಕ್ಲಬ್ ಚಿನ್ಮುಲಾದ್ರಿ ಮಾಜಿ ಅಧ್ಯಕ್ಷ ಈ.ಅರುಣ್‌ಕುಮಾರ್‌ಗೆ ದುರ್ಗದ ಸಿರಿ ಕಲಾ ವೈಭವ ರಾಜ್ಯ ಪ್ರಶಸ್ತಿ ನೀಡಿ ಗೌರವಿಸಲಾಯಿತು.**

## ಪ್ರಮುಖ ಸುದ್ದಿ

# ಅಧಿಕಾರಕ್ಕಾಗಿ ಇಂದಿರಾಗಾಂಧಿ ತುರ್ತು ಪರಿಸ್ಥಿತಿ ಹೇರಿಕೆ

» ಚಿತ್ರದುರ್ಗ




ಇಂದಿರಾಗಾಂಧಿರವರು ಅಧಿಕಾರಕ್ಕಾಗಿ ಸಂವಿಧಾನವನ್ನು ಅಮಾನತ್ತಿನಲ್ಲಿಟ್ಟು ಮಧ್ಯೆ ರಾತ್ರಿಯಲ್ಲಿ ರಾಷ್ಟಪತಿ ಗಳಿಂದ ಸಹಿ ಮಾಡಿಸಿ ತುರ್ತು ಪರಿಸ್ಥಿತಿ ಹೇರಿದರು. ಇದರ ಪರಿಣಾಮ ಇಡೀ ದೇಶವೇ ಬಂದಿಖಾನೆ ಯಾಯಿತು.. ಎಲ್ಲಾ ರಾಜಕೀಯ ಮುಖಂಡರುಗಳು ಜೈಲು ಸೇರಿದರು. ತುರ್ತು ಪರಿಸ್ಥಿತಿ ಹೇರಿದ್ದರ ಪರಿಣಾಮ 93 ಸಾವಿರ ಜನ ಜೈಲಿನಲ್ಲಿ ಇಲ್ಲಿರುವಂತಾಯಿತು ಎಂದು ವಿಧಾನ ಪರಿಷತ್ತಿನ ಮಾಜಿ ಸದಸ್ಯರಾದ ಡಾ. ಶಿವಯೋಗಿ ಸ್ವಾಮಿ ತಿಳಿಸಿದರು.

ಚಿತ್ರದುರ್ಗ ನಗರದ ಜಿಲ್ಲಾ ಕ್ರೀಡಾ ಭವನದಲ್ಲಿ ಸೋಮವಾರ ನಡೆದ ಸಿಟಿಜನ್ಸ್ ಫಾರ್ ಸೋಶಿಯಲ್ ಜಸ್ಟೀಸ್ ಚಿತ್ರದುರ್ಗ ಹಾಗೂ ಭಾರತೀಯ ಜನತಾ ಪಾರ್ಟಿ ಸಂಯುಕ್ತಾಶ್ರಯದಲ್ಲಿ ನಡೆದ ತುರ್ತು ಪರಿಸ್ಥಿತಿ ಹೇರಿದ ಕಾಗ್ರೇಸ್ ಕರಾಳ ಇತಿಹಾಸಕ್ಕೆ 50 ವರ್ಷ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ನವೆಂಬರ್ 26ನ್ನು ನರೇಂದ್ರ ಮೋದಿರವರು ಸಂವಿಧಾನ ಎಂದು ಘೋಷಣೆ ಮಾಡಿದರು..

ಹಾಗೆಯೇ ಜೂನ್25ನ್ನು ಸಂವಿಧಾನ ಹತ್ಯೆ ದಿನ ಎಂದು ಘೋಷಣೆ ಮಾಡಬೇಕು.ಅನುರಾಗ ಠಾಕೂರ್‌ರವರು ಕಾಂಗ್ರೆಸ್ ನವರು ಸಂವಿಧಾನವನ್ನು ಬಗ್ಗಲಲ್ಲಿ ಇಟ್ಟುಕೊಂಡು ಓಡಾಡುತ್ತೀರಿ ಅದರಲ್ಲಿ ಎಷ್ಟು ಪುಟಗಳಿವೆ ಎಂದು ಹೇಳಿ ಕೇಳಿದ್ದ ಸರಿಯಾಗಿದೆ.ಇತಿಹಾಸವನ್ನು ಗಮನದಲ್ಲಿಟ್ಟುಕೊಳ್ಳುವುದು ಅತ್ಯಂತ ಮುಖ್ಯವಾಗಿದೆ.. ತುರ್ತು ಪರಿಸ್ಥಿತಿಯ ಕಹಿ ಘಟನೆಯನ್ನು ಮೆಲುಕು ಹಾಕುವುದು ಅಷ್ಟೇ ಮುಖ್ಯವಾಗಿದೆ.ಪರಮೇಶ್ವರ್ ರವರು ಹೇಳುತ್ತಾರೆ ತುರ್ತು ಪರಿಸ್ಥಿತಿ ಹೇರಿ 50 ವರ್ಷ ಕಳೆದಿವೆ ಅದನ್ನು ಬಿಜೆಪಿಯವರು ಹೀಗೇಕೆ ನೆನಪು ಮಾಡಿಕೊಳ್ಳುತ್ತಾರೆ ಎಂದು. ಕಾಂಗ್ರೆಸ್ ಪಕ್ಷದವರು ದೇಶಕ್ಕೆ ಸ್ವತಂತ್ರ ತಂದು ಕೊಟ್ಟಿದ್ದು ನಾವು ಒಂದು ಹೇಳುತ್ತಾರೆ.. ಸ್ವಾತಂತ್ರ ಬಂದು 75 ವರ್ಷ ಕಳೆದಿವೆ ಆದರೆ ಅವರು ಏಕೆ ನೆನಪು ಮಾಡಿಕೊಳ್ಳುತ್ತಾರೆ..?

1971 ರ ಮಧ್ಯಂತರ ಚುನಾವಣೆಯಲ್ಲಿ ಸಂದರ್ಭದಲ್ಲಿ ಅಕ್ರಮ ಮಾಡಿದ್ದಾರೆ ಎಂದು ಅಲಹಾಬಾದ್ ಹೈಕೋರ್ಟ್‌ನಲ್ಲಿ ಪಿಟಿಷನ್ ಹಾಕಿದ್ದರ ಮೇರೆಗೆ ವಿಚಾರಣೆ ನಡೆದು 1975 ಜೂನ್-12 ರಂದು ಅಲಹಾಬಾದ್ ಹೈಕೋರ್ಟ್ ಇಂದಿರಾಗಾಂಧಿ ರವರು ಅಕ್ರಮ ಎಸಗಿದ್ದಾರೆ ಎಂದು ತೀರ್ಪು ನೀಡಿರುತ್ತದೆ. ಇಂದಿರಾಗಾಂಧಿರವರು ಪ್ರಧಾನಮಂತ್ರಿಯಾಗಿ ಮುಂದುವರಿಯುವಂತಿಲ್ಲ.. ಹಾಗೆಯೇ ಆರು ವರ್ಷಗಳ ಕಾಲ ಚುನಾವಣೆಯಲ್ಲಿ ಸ್ಪರ್ಧಿಸುವಂತಿಲ್ಲ ಎಂದು ತೀರ್ಪು ನೀಡಿರುತ್ತದೆ. ಅದರೂ ಸಹಾ ಇಂದಿರಾಗಾಂಧಿರವರು ಅಧಿಕಾರಕ್ಕಾಗಿ ಸಂವಿಧಾನವನ್ನು ಅಮಾನತ್ತಿನಲ್ಲಿಟ್ಟು ಮಧ್ಯೆ ರಾತ್ರಿಯಲ್ಲಿ ರಾಷ್ಟ್ರಪತಿ ಗಳಿಂದ ಸಹಿ ಮಾಡಿಸಿ ತುರ್ತು ಪರಿಸ್ಥಿತಿ ಹೇರಿದರು ಎಂದರು.

ಕಾರ್ಯಗಾರವನ್ನು ಉದ್ಘಾಟಿಸಿ ಮಾಜಿ ಉಪ ಮುಖ್ಯಮಂತ್ರಿ ಹಾಗೂ ಚಿತ್ರದುರ್ಗದ ಸಂಸದರಾದ ಗೋವಿಂದ ಎಂ ಕಾರಜೋಳರವರು ಮಾತನಾಡಿ, 1975ರ ಜೂನ್-12 ರಂದು ಅಲಹಾಬಾದ್ ಹೈಕೋರ್ಟ್ ಇಂದಿರಾ ಗಾಂಧಿಯವರು ಪ್ರಧಾನಮಂತ್ರಿಯಾಗಿ ಮುಂದುವರೆಯಲು ಅನರ್ಹ ಎಂದು ತೀರ್ಪು ನೀಡಿದ್ದರ ಹಿನ್ನೆಲೆಯಲ್ಲಿ ಸಂವಿಧಾನವನ್ನು ಅಮಾನತ್ತಿನಲ್ಲಿಟ್ಟು ತುರ್ತು ಪರಿಸ್ಥಿತಿಯನ್ನು ಏರಿದರು.ನ್ಯಾಯಾಲಯದಲ್ಲಿ ಯಾವುದೇ ಪ್ರಶ್ನೆ ಮಾಡದೇ ಇರುವ ಪರಿಸ್ಥಿತಿಯನ್ನು, ಸಂವಿಧಾನವನ್ನು ವಿರೂಪಗೊಳಿಸಿದ ಶ್ರೇಯಸ್ಸು ಇಂದಿರಾ ಗಾಂಧಿ ಅವರಿಗೆ ಸಲ್ಲುತ್ತದೆ.ಮೂಲ ಸಂವಿಧಾನದಲ್ಲಿ ಸಮಾಜವಾದ ಜಾತ್ಯಾತೀತ ಎಂಬ ಪದಗಳನ್ನು ಅಂಬೇಡ್ಕರ್‌ರವರು ಸೇರಿಸಿರಲಿಲ್ಲ. ಸಮಾಜವಾದ, ಜಾತ್ಯಾತೀತ ಎಂಬ ಪದಗಳನ್ನು ಸೇರಿಸಿದ್ದು ಕಾಂಗ್ರೆಸ್ ನವರು.ಆರ್ ಎಸ್ ಎಸ್ ನ ಪ್ರಮುಖರಾದ ದತ್ತಾತ್ರೇಯ ಹೊಂಬಾಳೆ ರವರು ಸಮಾಜವಾದ, ಜಾತ್ಯಾತೀತ ಪದಗಳನ್ನು ಸಂವಿಧಾನದಿಂದ ತೆಗೆಯುವಂತೆ ಹೇಳಿರುವುದಿಲ್ಲ ಬದಲಾಗಿ ಈ ಪದಗಳ ಅವಶ್ಯಕತೆ ಬಗ್ಗೆ ಪರಿಶೀಲನೆ ನಡೆಸಿ ಎಂದು ಹೇಳಿರುತ್ತಾರೆ..ಆದರೆ ಇದನ್ನು ಕಾಂಗ್ರೆಸ್ ನವರು ತಿರುಚಿ ಹೇಳಿದ್ದಾರೆ ಎಂದರು.

ಭಾರತದ ಸಂವಿಧಾನವನ್ನು ಅತಿ ಹೆಚ್ಚು ಭಾರಿ ತಿದ್ದುಪಡಿ ಮಾಡಿರುವುದು ಕಾಂಗ್ರೆಸ್ ನವರು.. ಕಾಂಗ್ರೆಸ್ ಪಕ್ಷದವರು 96 ಬಾರಿ ತಿದ್ದುಪಡಿ ಮಾಡಿದ್ದಾರೆ.ದಲಿತರಿಗೆ ಮೀಸಲಾತಿ ಕೊಡುವ ಸಲುವಾಗಿ ಅಟಲ್ ಬಿಹಾರಿ ವಾಜಪೇಯಿರವರು ಸಂವಿಧಾನ ತಿದ್ದುಪಡಿ ಮಾಡಿದ್ದರು..ದಲಿತರಿಗೆ 10 ವರ್ಷದ ನಂತರ ಮೀಸಲಾತಿಯನ್ನು ಮುಂದುವರಿಸುವ ಸಲುವಾಗಿ ನರೇಂದ್ರ ಮೋದಿಯವರು ಸಂವಿಧಾನವನ್ನು ಮಾಡಿದ್ದರು.ದೀನ ದಲಿತರ ಉತ್ತರಕ್ಕಾಗಿ ಸಂವಿಧಾನ ತಿದ್ದುಪಡಿ ಮಾಡಿದ್ದು ಬಿಜೆಪಿ. ಆದರೆ ಇಂದಿರಾಗಾಂಧಿ ಕುಟುಂಬದವರು ಅಧಿಕಾರ ಉಳಿಸಿಕೊಳ್ಳುವುದಕ್ಕೆ ಸಂವಿಧಾನ ತಿದ್ದುಪಡಿ ಮಾಡಿದ್ದಾರೆ ಎಂದು ಗೋವಿಂದ ಕಾರಜೋಳ ತಿಳಿಸಿದರು.

ಈ ಸಂದರ್ಭದಲ್ಲಿ ಮಾಜಿ ಶಾಸಕರಾದ ತಿಪ್ಪಾರೆಡ್ಡಿ, ಎಸ್.ಕೆ.ಬಸವರಾಜನ್, ವಿಧಾನಪರಿಷತ್ ಸದಸ್ಯರಾದ ನವೀನ್, ಜಿಲ್ಲಾಧ್ಯಕ್ಷರಾದ ಕೆ.ಟಿ. ಕುಮಾರಸ್ವಾಮಿ, ನಿಕಟಪೂರ್ವ ಜಿಲ್ಲಾಧ್ಯಕ್ಷರಾದ ಮುರಳಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಸಂಪತ್ ಕುಮಾರ್, ರಾಮದಾಸ್., ಸುರೇಶ್, ಹಾಗೂ ಕಾರ್ಯಕರ್ತರು ಮುಖಂಡರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಕ್ರೀಡಾ ಪ್ರೋತ್ಸಾಹಧನಕ್ಕೆ ಪ್ರಸ್ತಾವನೆ ಸಲ್ಲಿಸಲು ಅವಕಾಶ

» ಚಿತ್ರದುರ್ಗ

ನಮ್ಮೂರ ಶಾಲೆಗೆ ನಮ್ಮ ಯುವಜನರು ಕಾರ್ಯಕ್ರಮದಡಿ 2024-25ನೇ ಸಾಲಿಗೆ ರೂ.1 ಲಕ್ಷ ಕ್ರೀಡಾ ಪ್ರೋತ್ಸಾಹಧನ ಪ್ರಸ್ತಾವನೆ ಸಲ್ಲಿಸಲು ಜಿಲ್ಲೆಯ ಸರ್ಕಾರಿ ಶಾಲೆಗಳಿಗೆ ಅವಕಾಶ ಕಲ್ಪಿಸಲಾಗಿದೆ. ತಾಲೂಕು, ಜಿಲ್ಲೆ, ರಾಜ್ಯ ಮತ್ತು ರಾಷ್ಟ್ರ ಮಟ್ಟದ ಕ್ರೀಡಾಕೂಟಗಳಲ್ಲಿ ಉತ್ತಮ ಸಾಧನೆ ತೋರುವ ಕ್ರೀಡಾಪಟುಗಳನ್ನು ಹೊಂದಿರುವ ಸರ್ಕಾರಿ ಶಾಲೆಗಳನ್ನು ಗುರುತಿಸಿ ಪ್ರೋತ್ಸಾಹ ಧನ ನೀಡಲಾಗುವುದು. ಆಯ್ಕೆಯಾದ ಶಾಲೆಯ ದೈಹಿಕ ಶಿಕ್ಷಕರಿಗೆ ರೂ.10,000/- ಶಾಲೆಯ ಎಸ್.ಡಿ.ಎಂ.ಸಿಗೆ ಅಗತ್ಯ ಕ್ರೀಡಾ ಸಾಮಗ್ರಿಗಳ ಖರೀದಿಗೆ ರೂ.90,000/- ನೀಡಲಾಗುವುದು.
1 ಏಪ್ರಿಲ್ 2024 ರಿಂದ 31 ಮಾರ್ಚ್ 2025 ವರೆಗೆ ನಡೆದ ಕ್ರೀಡೆಯಲ್ಲಿ ಉತ್ತಮ ಸಾಧನೆ ತೋರಿದ ಶಾಲೆಗಳು ಉಪನಿರ್ದೇಶಕರ ಮೇಲು ಸಹಿಯೊಂದಿಗೆ ಜುಲೈ 05 ರೊಳಗೆ ಇಲಾಖೆ ಪ್ರಸ್ತಾವನೆ ಸಲ್ಲಿಸುವಂತೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕಿ ಎಸ್.ಎಂ.ನೆಲವಗಿ ತಿಳಿಸಿದ್ದಾರೆ.

### ಜೀವ ವಿಮೆ ಏಜೆಂಟ್ ನೇಮಕಾತಿಗೆ ಅರ್ಜಿ

» ದಾವಣಗೆರೆ

ದಾವಣಗೆರೆ ಅಂಚೆ ವಿಭಾಗದ ವ್ಯಾಪ್ತಿಯಲ್ಲಿ ಅಂಚೆ ಜೀವ ವಿಮೆ ಹಾಗೂ ಗ್ರಾಮೀಣ ಅಂಚೆ ಜೀವ ವಿಮೆಯ ಏಜೆಂಟರುಗಳಾಗಿ ಕಾರ್ಯನಿರ್ವಹಿಸಲು ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ಅಭ್ಯರ್ಥಿಗಳು ಜುಲೈ 15 ರೊಳಗಾಗಿ ತಮ್ಮ ಸಂಪೂರ್ಣ ವಿವರ ಹಾಗೂ ದಾಖಲೆಗಳೊಂದಿಗೆ ಅಂಚೆ ಅಧೀಕ್ಷಕರು, ದಾವಣಗೆರೆ ಅಂಚೆ ವಿಭಾಗ ದಾವಣಗೆರೆ-577001 ಇಲ್ಲಿಗೆ ನೇರ ಸಂದರ್ಶನಕ್ಕೆ ಹಾಜರಾಗಬೇಕೆಂದು ಅಂಚೆ ಅಧೀಕ್ಷಕರು ತಿಳಿಸಿದ್ದಾರೆ.

### ಗ್ಯಾರಂಟಿ ಯೋಜನೆ ಸಭೆ

» ದಾವಣಗೆರೆ

ಪ್ರಸಕ್ತ ಸಾಲಿನ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಪ್ರಗತಿ ಪರಿಶೀಲನಾ ಸಭೆಯನ್ನು ಜುಲೈ 5 ರಂದು ಮಧ್ಯಾಹ್ನ 3 ಗಂಟೆಗೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಶಾಮನೂರು ಟಿ ಬಸವರಾಜ್ ಇವರ ಅಧ್ಯಕ್ಷತೆಯಲ್ಲಿ ಆಯೋಜಿಸಲಾಗಿದೆ ಎಂದು ಜಿ.ಪಂ ಸಿಇಒ ಗಿತ್ತೆ ಮಾಧವ್ ವಿಠ್ಠಲ್ ರಾವ್ ತಿಳಿಸಿದ್ದಾರೆ.

### ಎಂಪೈರ್ ಟ್ರೇಡಿಂಗ್ ಕಂಪನಿಯಲ್ಲಿ ಹಣವನ್ನು ತೊಡಗಿಸಿ ಮೋಸ

» ದಾವಣಗೆರೆ

ದಾವಣಗೆರೆನಗರದಡಿಸಿಎಂಲೇಔಟಿನಎಂಎಸ್ಎಂ ಪ್ಲಾಜಾದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಆನ್‌ಲೈನ್ ರಿಂಗ್ ವ್ಯವಹಾರ ನಡೆಸಲು ತೆರೆದಿರುವ ಎಂಪೈರ್ ಟ್ರೇಡಿಂಗ್ ಕಂಪನಿ ತೆರೆದುಕೊಂಡು ಸಾರ್ವಜನಿಕರಿಂದ ಹಣವನ್ನು ಆರೋಪಿತರಾದ ಗಜಾನನ ತಂದೆ ರಾಮಪೂಜಾರಪ್ಪ ಇವರು ತಮ್ಮ ಸ್ನೇಹಿತರೊಂದಿಗೆ ಪಡೆದುಕೊಂಡು ಪ್ರತಿ ತಿಂಗಳು ಶೇಕಡಾ 5 ರಷ್ಟು ಲಾಭಾಂಶವನ್ನು ಕೊಡುವುದಾಗಿ ಹೇಳಿ ಕೆಲವು ತಿಂಗಳು ಕೊಟ್ಟು ನಂತರದ ದಿನಗಳಲ್ಲಿ ಲಾಭಾಂಶವನ್ನು ಮತ್ತು ಅಸಲಿನ ಹಣವನ್ನು ಕೊಡದೇ ಒಟ್ಟು ಸಾರ್ವಜನಿಕರಿಂದ 31.50,000/- ರೂಗಳನ್ನು ಕಟ್ಟಿಸಿಕೊಂಡು 61.62.800/- ರೂ ಲಾಭಾಂಶದ ಹಣವನ್ನು ಜಮಾ ಮಾಡಿದ್ದು ರೂ.37,33,500ಗಳನ್ನು 6 ತಿಂಗಳ ಲಾಭಾಂಶದ ಹಣವನ್ನು ಮತ್ತು ಅಸಲಿನ ಹಣವನ್ನು ಕೊಡದೇ ಮೋಸ ಮಾಡಿರುತ್ತಾರೆ ಎಂದು ಹರೀಶ.ಕೆ ತಂದೆ ಉಮೇಶಪ್ಪ ಪೊಲೀಸ್ ಠಾಣೆಗೆ ದೂರು ಸಲ್ಲಿಸಿರುತ್ತಾರೆ. ಠೇವಣಿದಾರರು ಎಂಪೈರ್ ಟ್ರೇಡಿಂಗ್ ಕಂಪನಿಯಲ್ಲಿ ಹಣವನ್ನು ತೊಡಗಿಸಿ ಮೋಸ ಹೋಗಿದ್ದಲ್ಲಿ ಸೂಕ್ತ ದಾಖಲಾತಿಗಳೊಂದಿಗೆ ದಾವಣಗೆರೆ ನಗರದ ಸಿಇಎನ್ ಪೊಲೀಸ್ ಠಾಣೆ, ಮೊದಲನೇ ಮಹಡಿ ವಿದ್ಯಾನಗರ ಪೊಲೀಸ್ ಇನ್ಸ್‌ಪೆಕ್ಟರ್ ರವರ ಬಳಿ ಹೋಗಿ ಮಾಹಿತಿ ನೀಡಬೇಕು. ದೂ.ಸಂ:08192-225119 ನ್ನು ಸಂಪರ್ಕಿಸಲು ಪೊಲೀಸ್ ನಿರೀಕ್ಷಕರು ತಿಳಿಸಿದ್ದಾರೆ.

### ಉಚಿತ ಫಾಸ್ಟ್ ಪುಡ್ ತಯಾರಿಕೆ ತರಬೇತಿ

» ದಾವಣಗೆರೆ

ಬೆಂಗಳೂರು ಗ್ರಾಮಾಂತರ ಜಿಲ್ಲೆ ಹೊಸಕೋಟೆ ತಾಲ್ಲೂಕು ಸೊಣ್ಣಹಳ್ಳಿಪುರದಲ್ಲಿರುವ ಕೆನರಾ ಬ್ಯಾಂಕ್ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆಯಲ್ಲಿ ಜುಲೈ ತಿಂಗಳ ಎರಡನೆಯ ವಾರದಿಂದ ನಿರುದ್ಯೋಗಿ ಪುರುಷ ಹಾಗೂ ಮಹಿಳೆಯರಿಗೆ ಉಚಿತ ಫಾಸ್ಟ್ ಪುಡ್ ತಯಾರಿಕೆ ತರಬೇತಿ ಶಿಬಿರವನ್ನು ಏರ್ಪಡಿಸಲಾಗಿದೆ. ಶಿಬಿರದಲ್ಲಿ ಪಾನಿ ಪೂರಿ, ಬೇಲ್ ಪೂರಿ, ದಹಿ ಪೂರಿ, ಸೇವ್ ಪೂರಿ, ಚಾಟ್ ಮಸಾಲ, ಕಚೋರಿ, ಗೋಬಿ ಮಂಚೂರಿ ಇನ್ನಿತರೆ ಚಾಟ್ಸ್ ಗಳ ತಯಾರಿಕೆಯ ಬಗ್ಗೆ ತರಬೇತಿ ನೀಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ಸಂಸ್ಥೆಯನ್ನು ದೂ.ಸಂ 9505894247, 8970476050, 9591514754, 9686248369, 8970446644 ಗಳಿಗೆ ಸಂಪರ್ಕಿಸಲು ಸಂಸ್ಥೆಯ ನಿರ್ದೇಶಕರು ತಿಳಿಸಿದ್ದಾರೆ.

# ನಗರದ ವಾಣಿಜ್ಯ ಸಂಕೀರ್ಣಗಳ ಕಾಮಗಾರಿ ಪುನರಾರಂಭಕ್ಕೆ ಚಿಂತನೆ: ಸಚಿವ ಸುಧಾಕರ್

» ಚಿತ್ರದುರ್ಗ





ನಗರದ ಗಾಂಧಿ ವೃತ್ತ ಹಾಗೂ ಸಂತೆಹೊಂಡದ ಬಳಿ 15ನೇ ಹಣಕಾಸು ಯೋಜನೆಯಡಿ ಸಂಕೀರ್ಣ ನಿರ್ಮಾಣ ಕಾಮಗಾರಿ ಆರಂಭಿಸಿ, ಪ್ರಸ್ತುತ ಸ್ಥಗಿತಗೊಂಡಿರುವವಾಣಿಜ್ಯಸಂಕೀರ್ಣಗಳ ಕಾಮಗಾರಿಯನ್ನು ಪುನರಾರಂಭಿಸಲು ಚಿಂತನೆ ನಡೆಸಲಾಗುತ್ತಿದೆ ಎಂದು ಯೋಜನೆ ಮತ್ತು ಸಾಂಖ್ಯಿಕ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಹೇಳಿದರು.

ಸೋಮವಾರ ನಗರದ ಗಾಂಧಿವೃತ್ತ ಹಾಗೂ ಸಂತೆಹೊಂಡದ ಬಳಿಯ ವಾಣಿಜ್ಯ ಸಂಕೀರ್ಣಗಳ ಕಾಮಗಾರಿ ವೀಕ್ಷಣೆ ನಡೆಸಿ ಅವರು ಮಾತನಾಡಿದರು.

ಬಹಳ ವರ್ಷಗಳ ಹಿಂದೆ 15ನೇ ಹಣಕಾಸು ಯೋಜನೆಯಡಿ ಇಲ್ಲಿ ವಾಣಿಜ್ಯ ಸಂಕೀರ್ಣಗಳನ್ನು ನಿರ್ಮಿಸಲು ಯೋಜನೆ ರೂಪಿಸಲಾಗಿತ್ತು. ಅನುದಾನ ಕೊರತೆಯಿಂದ ಕಾಮಗಾರಿಗಳು ಅರ್ಧಕ್ಕೆ ನಿಂತಿವೆ. ಡಿ.ಎಂ.ಎಫ್ ಹಾಗೂ ನಗರಸಭೆಯ ಅನುದಾನ ನೀಡಿ ಅರ್ಧಕ್ಕೆ ನಿಂತ ಕಾಮಗಾರಿಗಳನ್ನು ಮುಂದುವರಿಸಲು ಆಲೋಚಿಸಲಾಗಿದ್ದು, ನಗರಸಭೆ ಸದಸ್ಯರು, ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳೊಂದಿಗೆ ಚರ್ಚಿಸಿ ಮುಂದಿನ ಕ್ರಮ ಕೈಗೊಳ್ಳುವುದಾಗಿ ಅವರು ಹೇಳಿದರು.

ಸ್ವಚ್ಛತೆಗೆ ಆದ್ಯತೆ ನೀಡಲು ಸೂಚನೆ: ನಗರದ ಹೃದಯ ಭಾಗದಲ್ಲಿರುವ ಗಾಂಧಿ ವೃತ್ತ ಹಾಗೂ ಸಂತೆಹೊಂಡದ ಬಳಿ ಕಸ ಹಾಗೂ ತ್ಯಾಜಗಳನ್ನು ಎಲ್ಲೆಂದರಲ್ಲಿ ಬಿಸಾಡಿರುವುದನ್ನು ಕಂಡು ಸಚಿವ ಡಿ.ಸುಧಾಕರ್ ತೀವ್ರ ಅಸಮಾಧನ ವ್ಯಕ್ತಪಡಿಸಿದರು. ನಗರಸಭೆ ಅಧಿಕಾರಿಗಳು ಸ್ವಚ್ಛತೆಗೆ ಆದ್ಯತೆ ನೀಡುವಂತೆ ಸೂಚಿಸಿದರು. ಸಂತೆಹೊಂಡದ ಬಳಿ ರಾತ್ರಿಯ ವೇಳೆ ಹೋಟೆಲ್‌ಗಳಿಂದ ತಾಜ್ಯಗಳನ್ನು ತಂದು ಸುರಿಯುತ್ತಾರೆ ಎಂದು ಬೀದಿ ಬದಿ ವ್ಯಾಪಾರಿಗಳು ಸಚಿವರ ಗಮನಕ್ಕೆ ತಂದರು. ಇದಕ್ಕೆ ಸ್ಪಂದಿಸಿದ ಸಚಿವ ಡಿ.ಸುಧಾಕರ್ ಅವರು, ತ್ಯಾಜ್ಯ ಸುರಿಯುವ ಹೋಟೆಲ್‌ಗಳ ಲೈಸೆನ್ಸ್ ರದ್ದು ಮಾಡಲು ಕೂಡಲೆ ಕ್ರಮ ಜರುಗಿಸುವಂತೆ ನಗರಸಭೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಮಾರುಕಟ್ಟೆ ಸ್ಥಳಾಂತರಕ್ಕೆ ನಿರ್ದೇಶನ : ಸಂತೆಹೊಂಡದ ಎದುರುಗಡೆ ಇರುವ ಸ್ಥಳದಲ್ಲಿ ತರಕಾರಿ, ಹಣ್ಣು ಮಾರಾಟ ಅಂಗಡಿಗಳು ಹಾಗೂ ಇತರೆ ಬೀದಿಬದಿ ವ್ಯಾಪಾರಿಗಳನ್ನು ಖಾಸಗಿ ಬಸ್ ನಿಲ್ದಾಣದ ಹಿಂಭಾಗದಲ್ಲಿ ನಿರ್ಮಿಸಿರುವ ಮಾರುಕಟ್ಟೆಗೆ ಸ್ಥಳಾಂತರಿಸುವಂತೆ ಸಚಿವ ಡಿ.ಸುಧಾಕರ್ ಅವರು ನಗರಸಭೆ ಆಯುಕ್ತೆ ಎಂ.ರೇಣುಕಾ ಅವರಿಗೆ ನಿರ್ದೇಶನ ನೀಡಿದರು.

ಸುಮಾರು ಹತ್ತು ವರ್ಷಗಳ ಹಿಂದೇ ಖಾಸಗಿ ಬಸ್ ನಿಲ್ದಾಣದ ಹಿಂಭಾಗದಲ್ಲಿ, ಮಾರುಕಟ್ಟೆ ನಿರ್ಮಿಸಿ, ವ್ಯಾಪಾರಿಗಳಿಗೆ ಈ ಹಿಂದೆಯೇ ಹಂಚಿಕೆ ಮಾಡಲಾಗಿದೆ. ಆದರೂ ವ್ಯಾಪಾರಿಗಳು ಸ್ಥಳಾಂತರವಾಗಿಲ್ಲ. ಇದರಿಂದ ನಗರಸಭೆಗೆ ಆರ್ಥಿಕ ನಷ್ಟ ಉಂಟಾಗಿದೆ. ಕೂಡಲೇ ಸಂತೆಹೊಂಡದ ಬಳಿಯ ತರಕಾರಿ, ಹಣ್ಣು ವ್ಯಾಪಾರಿಗಳನ್ನು ಸ್ಥಳಾಂತರಿಸಬೇಕು. ಇಲ್ಲವಾದರೆ, 10 ವರ್ಷಗಳ ಹಿಂದಿನ ಟೆಂಡರ್ ರದ್ದು ಮಾಡಿ ಹೊಸದಾಗಿ ಅರ್ಜಿ ಕರೆದು, ವ್ಯಾಪಾರಿಗಳಿಗೆ ಸ್ಥಳ ನಿಗದಿ ಮಾಡಬೇಕು. ಇಲ್ಲವಾದರೆ, ನಗರಸಭೆಗೆ ಉಂಟಾದ ಆರ್ಥಿಕ ನಷ್ಟವನ್ನು ಆಯುಕ್ತರೇ ಭರಿಸುವಂತೆ ಸರ್ಕಾರಕ್ಕೆ ಪತ್ರ ಬರೆಯುವುದಾಗಿ ಸಚಿವ ಡಿ.ಸುಧಾಕರ್ ಎಚ್ಚರಿಸಿದರು.

ಸಚಿವರ ಭೇಟಿ ವೇಳೆ, ಜಿಲ್ಲಾಧಿಕಾರಿ ಜಿ.ವೆಂಕಟೇಶ್, ನಗರಸಭೆ ಅಧ್ಯಕ್ಷೆ ಸುಮಿತಾ ರಾಘವೇಂದ್ರ, ಪೌರಾಯುಕ್ತೆ ಎಂ.ರೇಣುಕಾ ಸೇರಿದಂತೆ ನಗರಸಭೆ ಅಧಿಕಾರಿಗಳು ಉಪಸ್ಥಿತರಿದ್ದರು.

## ಕಾಂಗ್ರೆಸ್ ಸರ್ಕಾರದಲ್ಲಿ ಭ್ರಷ್ಟಾಚಾರ ಮುಗಿಲುಮಟ್ಟಿದೆ

» ಚಿತ್ರದುರ್ಗ




ವಸತಿ ಇಲಾಖೆಯಲ್ಲಿ ಸಚಿವರು ಹಣವನ್ನು ಪಡೆದು ಮನೆ ನೀಡುವ ಕಾರ್ಯ ಹೆಚ್ಚಾಗಿದೆ.. ಕಾಂಗ್ರೆಸ್ ಪಕ್ಷದ ಸರ್ಕಾರದಲ್ಲಿ ಭ್ರಷ್ಟಾಚಾರ ತಾಂಡವಾಡುತ್ತಿದೆ ಬಿಜೆಪಿ ಸರ್ಕಾರ 40% ರಷ್ಟು ಭ್ರಷ್ಟ ಸರ್ಕಾರ ಅನ್ನುತಿದ್ದರು ಆದರೆ ಈಗ ಕಾಂಗ್ರೆಸ್ ಸರ್ಕಾರ 50% ರಿಂದ 60% ರಷ್ಟು ಭ್ರಷ್ಟಾಚಾರ ಮಾಡುತ್ತಿದ್ದಾರೆ ಎಂದು ಆಮ್ ಆದ್ಮಿ ಪಾರ್ಟಿಯ ಜಿಲ್ಲಾಧ್ಯಕ್ಷರಾದ ಬಿ.ಇ.ಜಗದೀಶ್ ಆರೋಪಿಸಿದ್ದಾರೆ.

ಚಿತ್ರದುರ್ಗ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ಸರ್ಕಾರದಲ್ಲಿ ಭ್ರಷ್ಟಾಚಾರ ಮುಗಿಲುಮಟ್ಟಿದೆ ಹಣ ಕೊಡದೇ ಯಾವುದೇ ಸರ್ಕಾರಿ ಕಛೇರಿಗಳಲ್ಲಿ ಕೆಲಸವಾಗುತ್ತಿಲ್ಲ ಇದರಿಂದ ಬಡವರ ಬದುಕು ದುಸ್ಥಿತಿಯಲ್ಲಿದೆ.ಭ್ರಷ್ಟಾಚಾರವನ್ನು ಮಟ್ಟ ಹಾಕುತ್ತಿದ್ದ ಲೋಕಾಯುಕ್ತ ಅಧಿಕಾರವನ್ನು ಮೊಟುಕುಗೊಳಿಸಿದ್ದಾರೆ.ರಾಜ್ಯದ ಜನತೆ ಕಾಂಗ್ರೆಸ್ ಸರ್ಕಾರದ ನೀತಿಗಳಿಂದ ಬೇಸತ್ತಿದ್ದಾರೆ.ಲಂಚವಿಲ್ಲದೇ ಯಾವುದೇ ಕಾರ್ಯಗಳು ನಡೆಯುತ್ತಿಲ್ಲ.ಬಿಜೆಪಿ ಪಕ್ಷದ ಮೇಲೆ ಲಂಚದ ಆರೋಪ ಮಾಡಿ ಅಧಿಕಾರಕ್ಕೆ ಬಂದ ಕಾಂಗ್ರೆಸ್ ಪಕ್ಷ ಅವರ ನೀತಿಯನ್ನೇ ಮುಂದುವರಿಸಿದೆ ಎಂದು ದೂರಿದರು.

ಈ ಎರಡು ರಾಜಕೀಯ ಪಕ್ಷಗಳ ಬಗ್ಗೆ ಮತದಾರರು ಬೇಸತ್ತಿದ್ದಾರೆ.. ಮುಂದಿನ ಚುನಾವಣೆಯಲ್ಲಿ ಪರ್ಯಾಯ ಪಕ್ಷವನ್ನು ಗೆಲ್ಲಿಸಬೇಕಾಗಿದೆ.ಇಂದಿನ ಅಧಿಕಾರ ಶೇ 30% ರಷ್ಟು ಇರುವ ಶ್ರೀಮಂತರ ಕೈಯಲ್ಲಿದೆ.. ಶೇ 70% ರಷ್ಟು ಇರುವ ಬಡವರು ಮತ್ತೆ ಬಡವರಾಗುತ್ತಿದ್ದಾರೆ. ಕಾಂಗ್ರೆಸ್ ಪಕ್ಷದ ಶಾಸಕರುಗಳೇ ತಮ್ಮ ಪಕ್ಷದ ಸಚಿವರ ವಿರುದ್ಧ ಕಿಡಿ ಕಾರುತ್ತಿದ್ದಾರೆ.ಅಧಿಕಾರಿಗಳ ಮೂಲಕ ರಾಜಕಾರಣಿಗಳು ಹಣವನ್ನು ಸಂಗ್ರಹಿಸುತ್ತಿದ್ದಾರೆ.. ಇದಕ್ಕೆ ಯಾವುದೇ ಸಾಕ್ಷಿ ಸಿಗುತ್ತಿಲ್ಲ ಆದ್ದರಿಂದ ರಾಜಕಾರಣಿಗಳು ಶಿಕ್ಷೆಯಿಂದ ತಪ್ಪಿಸಿಕೊಳ್ಳುತ್ತಿದ್ದಾರೆ.ರಾಜ್ಯದಲ್ಲಿನ ಒಂದು ಪಕ್ಷ ಧರ್ಮದ ಕಡೆಯಾದರೆ.. ಮತ್ತೊಂದು ಪಕ್ಷ ನಿಗದಿತವಾದ ಜಾತಿಯನ್ನು ಓಲೈಕೆ ಮಾಡುತ್ತಿದೆ.. ಇದರಿಂದ ಇತರೆಯವರು ಸಂಕಷ್ಟಕ್ಕೆ ಈಡಾಗಿದ್ದಾರೆ ಎಂದ ಅವರು ಕಾಂಗ್ರೆಸ್ ಸರ್ಕಾರ ತನ್ನ ಚಾಳಿಯನ್ನು ಸರಿಪಡಿಸಿಕೊಳ್ಳದಿದ್ದರೆ ಅವರ ವಿರುದ್ಧ ಹೋರಾಟವನ್ನು ಮಾಡುವುದಾಗಿ ಎಚ್ಚರಿಸಿದರು.

ಗೋಷ್ಠಿಯಲ್ಲಿ ಕಾರ್ಯದರ್ಶಿ ರಾಮಣ್ಣ, ಸಂಘಟನಾ ಕಾರ್ಯದರ್ಶಿ ರವಿ, ಪ್ರಧಾನ ಕಾರ್ಯದರ್ಶಿ ಲೋಕೇಶ್, ಜಂಟಿ ಕಾರ್ಯದರ್ಶಿ ದಾಸಪ್ಪ ಭಾಗವಹಿಸಿದ್ದರು.

## ನೆಹರು ನಗರ: ಪೌಷ್ಠಿಕ ದಿನ ಆಚರಣೆ



» ಚಿತ್ರದುರ್ಗ

ಚಿತ್ರದುರ್ಗ ನಗರದ ನೆಹರು ನಗರ ವ್ಯಾಪ್ತಿಯ ಉಚ್ಚಂಗಿ ಯಲ್ಲಮ್ಮ ದೇವಸ್ಥಾನದ ಹತ್ತಿರದ ಅಂಗನವಾಡಿ ಕೇಂದ್ರದಲ್ಲಿ ಈಚೆಗೆ ಪೌಷ್ಟಿಕ ದಿನ ಆಚರಣೆ ಮಾಡಲಾಯಿತು. ನೆಹರು ನಗರ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ.ಸೈಯದ್ ಬಿಲಾಲ್ ಅವರು, ಗರ್ಭಿಣಿ ಸ್ತ್ರೀಯರಿಗೆ ಆರೋಗ್ಯ ಕಾರ್ಯಕ್ರಮಗಳು ಮತ್ತು ಪೌಷ್ಟಿಕಾಂಶಗಳ ಬಗ್ಗೆ ಮಾಹಿತಿ ನೀಡದರು. ಪೌಷ್ಠಿಕ ಆಹಾರ ಜಿಲ್ಲಾ ಮೇಲ್ವಿಚಾರಕಿ ಸಣ್ಣ ರಂಗಮ್ಮ ಅವರು ಪೌಷ್ಟಿಕಾಂಶದ ಬಗ್ಗೆ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳ ಕುರಿತು ಮಾಹಿತಿ ನೀಡಿ, ಅಪೌಷ್ಟಿಕತೆ ಇರುವ ಮಕ್ಕಳಿಗೆ ಪೌಷ್ಟಿಕಾಂಶ ಒಳಗೊಂಡ ಆಹಾರ ಸೇವಿಸಬೇಕು ಎಂದು ತಿಳಿಸಿದರು. ನಂತರ ಅತಿಸಾರ ಭೇದಿಯ ಬಗ್ಗೆ ಮಾಹಿತಿ ನೀಡಿದರು. ಕಾರ್ಯಕ್ರಮದಲ್ಲಿ ಆರೋಗ್ಯ ನಿರೀಕ್ಷಣಾಧಿಕಾರಿ ಗುರುಮೂರ್ತಿ, ಆರೋಗ್ಯ ಸುರಕ್ಷತಾಧಿಕಾರಿ ಮಂಜುಳಾ, ಅಂಗನವಾಡಿ ಕಾರ್ಯಕರ್ತೆ ಬಂಗಾರಮ್ಮ, ಆಶಾ ಕಾರ್ಯಕರ್ತೆ ಭೀಮಕ್ಕ ಇದ್ದರು.

## ಶಿಕ್ಷಣ ಇಲಾಖೆಯಲ್ಲಿ ಕಾರ್ಯನಿರ್ವಹಿಸುವುದೇ ಹೆಮ್ಮೆಯ ಕೆಲಸ

» ಚಳ್ಳಕೆರೆ



ತಾಲ್ಲೂಕಿನ ಪುರಿಚಿನ್ನಯ್ಯನಹಟ್ಟಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶಿಕ್ಷಕರಾಗಿ ಸೇವೆ ಸಲ್ಲಿಸಿ ನಿವೃತ್ತರಾದ ಎಚ್.ತಿಪ್ಪೇಸ್ವಾಮಿಯವರನ್ನು ಅಭಿನಂದಿಸಿ ಸನ್ಮಾನಿಸಿ ಬೀಳ್ಕೊಡಲಾಯಿತು.

ಎಚ್.ಮಂಜುನಾಥ ಮಾತನಾಡಿ, ಎಚ್. ತಿಪ್ಪೇಸ್ವಾಮಿಯವರು ಶಿಕ್ಷಣ ಇಲಾಖೆಯಲ್ಲಿ ಕಳೆದ ಹಲವಾರು ವರ್ಷಗಳಿಂದ ಉತ್ತಮ ಸೇವೆ ಮಾಡಿದ್ದಾರೆ.ವಿದ್ಯಾರ್ಥಿಗಳಿಗೆಗುಣಾತ್ಮಕಬೋಧನೆ ನೀಡುವ ಮೂಲಕ ಶಿಕ್ಷಣದ ಪ್ರಗತಿಯನ್ನು ಹೆಚ್ಚಿಸಿದ್ದಾರೆ. ಪ್ರತಿನಿತ್ಯವೂ ಶಾಲೆಗೆ ಸರಿಯಾದ ಸಮಯಕ್ಕೆ ಆಗಮಿಸಿ ಅನೇಕ ವಿಚಾರಗಳ ಬಗ್ಗೆ ಎಲ್ಲರೊಂದಿಗೆ ಚರ್ಚಿಸಿ ವಿಷಯವನ್ನು ಅರ್ಥಗರ್ಭಿತವಾಗಿ ವಿವರಿಸಿ ಕಲೆ ಅವರಲ್ಲಿತ್ತು. ಅವರ ಮಾರ್ಗದರ್ಶನದಲ್ಲಿ ಸಾವಿರಾರು ವಿದ್ಯಾರ್ಥಿಗಳು ಶಿಕ್ಷಣವನ್ನು ಪೂರೈಸಿ ಉತ್ತಮ ಬದುಕನ್ನು ರೂಪಿಸಿಕೊಂಡಿದ್ದಾರೆಂದರು.

ಸನ್ಮಾನವನ್ನು ಸ್ವೀಕರಿಸಿ ಮಾತನಾಡಿದ ಎಚ್.ತಿಪ್ಪೇಸ್ವಾಮಿ, ನಾವು ಮಾಡುವ ಉತ್ತಮ ಸೇವೆ ನಮಗೆ ವಿಶೇಷ ಗೌರವ, ಮೌಲ್ಯತಂದುಕೊಡುತ್ತದೆ. ಶಿಕ್ಷಣ ಇಲಾಖೆಯಲ್ಲಿ ಕೆಲಸ ನಿರ್ವಹಿಸುವುದೇ ಹೆಮ್ಮೆ ವಿಷಯ. ನಾನು ಸಹ 30ವರ್ಷಕ್ಕೂ ಹೆಚ್ಚು ಕಾಲ ಶಿಕ್ಷಕನಾಗಿ ಸೇವೆ ಸಲ್ಲಿಸಿ ತೃಪ್ತಿಪಟ್ಟಿದ್ದೇನೆಂದರು.

## ಅವಧಿ ವಿಸ್ತರಣೆ

ದಾವಣಗೆರೆ: ಪ್ರಸಕ್ತ ಸಾಲಿನಲ್ಲಿ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ಅಭ್ಯಾಸ ಮಾಡುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಶುಲ್ಕ ಮರುಪಾವತಿ ಸೌಲಭ್ಯಕ್ಕಾಗಿ ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸುವ ದಿನಾಂಕವನ್ನು ಜುಲೈ 10 ರವರೆಗೆ ವಿಸ್ತರಿಸಲಾಗಿದೆ ಎಂದು ಇಲಾಖೆ ಅಧಿಕಾರಿಯವರು ತಿಳಿಸಿದ್ದಾರೆ.

**ಪ್ರಮುಖ ಸುದ್ದಿ**

# ಮಕ್ಕಳಷ್ಟೇ ಅಲ್ಲ ಪೋಷಕರು ದೊಡ್ಡ ಕನಸು ಕಾಣಬೇಕು

» ದಾವಣಗೆರೆ



ದೊಡ್ಡ ಕನಸು ಕಾಣುವುದು ಕೇವಲ ಮಕ್ಕಳಷ್ಟೇ ಅಲ್ಲ, ಪೋಷಕರದ್ದೂ ಆಗಿರಬೇಕು. ಉಜ್ವಲ ಭವಿಷ್ಯ ರೂಪಿಸಲು ಹಗಲಿರುಳು ಶ್ರಮಿಸುವ ತಂದೆ ತಾಯಿಗಳು ಕನಸು ಸಾಕಾರಗೊಳ್ಳಲು ಬೇಕಾದ ಸಂಸ್ಕೃತಿ, ಸಂಸ್ಕಾರ ಮತ್ತು ಮಕ್ಕಳು ಪುಸ್ತಕ ಓದುವ ಹವ್ಯಾಸವನ್ನು ಮಕ್ಕಳಲ್ಲಿ ಬೆಳೆಸಬೇಕು ಎಂದು ಇನ್ ಸೈಟ್ಸ್ ಐಎಎಸ್ ಸಂಸ್ಥೆಯ ಸಂಸ್ಥಾಪಕ ನಿರ್ದೇಶಕರೂ ಆದ ಸ್ವಾಭಿಮಾನಿ ಬಳಗದ ರಾಜ್ಯಾಧ್ಯಕ್ಷ ಜಿ. ಬಿ. ವಿನಯ್ ಕುಮಾರ್ ಅವರು ಸಲಹೆ ನೀಡಿದರು.

ಹರಿಹರ ಪಟ್ಟಣದ ಐಟಿಐ ಕಾಲೇಜಿನಲ್ಲಿ ಸಂಸ್ಕಾರ ಟ್ಯೂಷನ್ ಉದ್ಘಾಟನಾ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿದ ಅವರು, ದೊಡ್ಡ ಕನಸು ಎಂದರೆ ಹುದ್ದೆಗೆ ಹೋಗುವುದಷ್ಟೇ ಅಲ್ಲ. ದೊಡ್ಡ ದೊಡ್ಡ ಶಿಕ್ಷಣ ಸಂಸ್ಥೆಗಳಲ್ಲಿಯೂ ಓದಬೇಕೆಂಬ ಆಸೆ ಇರಬೇಕು. ದೆಹಲಿಯಲ್ಲಿ ಏಮ್ಸ್, ಐಐಟಿ ಸೇರಿದಂತೆ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಓದುವ ಛಲ ಮಕ್ಕಳಲ್ಲಿ ಬರುವಂತೆ ಪ್ರೇರೇಪಿಸಬೇಕು. ಮಕ್ಕಳಿಗೆ ಕಾದಂಬರಿ, ಸಾಹಿತ್ಯ, ವ್ಯಕ್ತಿ ಪರಿಚಯ, ಸಾಹಿತ್ಯೇತರ ಪುಸ್ತಕಗಳು, ದಿನಪತ್ರಿಕೆ ಓದುವ ರೂಢಿ ಮಾಡಬೇಕು. ಆಗ ಪ್ರಪಂಚ ಹಾಗೂ ದೇಶದಲ್ಲಿ ಆಗುತ್ತಿರುವ ಹಲವಾರು ವಿಚಾರಗಳು ಗೊತ್ತಾಗುತ್ತವೆ. ಆಯ್ಕೆ ಮಾಡಿಕೊಳ್ಳಲು ಸುಲಭವಾಗುತ್ತದೆ ಎಂದು ಪ್ರತಿಪಾದಿಸಿದರು.

ಕಳೆದ 11 ವರ್ಷದಿಂದ ಐಎಎಸ್ ಕೋಚಿಂಗ್ ಸೆಂಟರ್ ನಡೆಸುತ್ತಿದ್ದೇನೆ. ಕರ್ನಾಟಕ ಮಾತ್ರವಲ್ಲ ಜಮ್ಮು ಕಾಶ್ಮೀರ, ಲಖ್ನೋ, ಹೈದರಾಬಾದ್, ದಾವಣಗೆರೆಯಲ್ಲಿಯೂ ಐಎಎಸ್ ಕೋಚಿಂಗ್ ಸೆಂಟರ್ ಆರಂಭಿಸಲಾಗಿದೆ. ಈ ಮೂಲಕ ದಾವಣಗೆರೆ ಜಿಲ್ಲೆಯ ಗ್ರಾಮೀಣ ಪ್ರದೇಶದ ಮಕ್ಕಳೂ ಐಎಎಸ್, ಐಪಿಎಸ್ ಆಗಬೇಕೆಂಬ ಸದುದ್ದೇಶದಿಂದ ನಡೆಸಲಾಗುತ್ತಿದೆ. ಇದುವರೆಗೆ 1500 ಕ್ಕೂ ಹೆಚ್ಚು ಐಎಎಸ್ ಅಧಿಕಾರಿಗಳು ನಮ್ಮ ಸಂಸ್ಥೆಯಲ್ಲಿ ಓದಿದವರು ಆಗಿದ್ದಾರೆ. ಇದು ನಮಗೆ ಹೆಮ್ಮೆಯ ವಿಚಾರ. ಏಮ್ಸ್, ಐಐಟಿಯಲ್ಲೂ ಓದಿದವರು ನನ್ನ ವಿದ್ಯಾರ್ಥಿಗಳು. ಎಂಜಿನಿಯರಿಂಗ್, ಮೆಡಿಕಲ್ ಸೇರಿದಂತೆ ದೊಡ್ಡ ಸಂಸ್ಥೆಗಳಲ್ಲಿ ಓದಿದವರು ಸಹ ನಮ್ಮಲ್ಲಿ ಕೋಚಿಂಗ್ ಪಡೆದಿದ್ದಾರೆ ಎಂದು ತಿಳಿಸಿದರು.

ಕೇವಲ ಪಠ್ಯ ಪುಸ್ತಕಗಳು ಮಾತ್ರವಲ್ಲ. ಕ್ರೀಡಾ ಚಟುವಟಿಕೆಗಳಲ್ಲಿ ಮಕ್ಕಳು ಆಸಕ್ತಿ ಬೆಳೆಸಿಕೊಳ್ಳಬೇಕು. ಯುಎಸ್, ಫ್ರೆಂಚ್ ಟೆನಿಸ್ ಟೂರ್ನಿಗಳು ನಡೆಯುತ್ತಿವೆ. ಮಕ್ಕಳು ನೋಡಿದರೆ ಆಟಗಾರರ ಪರಿಚಯವಾಗುತ್ತದೆ. ಅವರಿಗೂ ಟೆನಿಸ್ ಆಟಗಾರನಾಗಬೇಕೆಂಬ ಆಸೆ ಬರುತ್ತದೆ. ಇಂಗ್ಲೀಷ್ ಮಾಧ್ಯಮದ ಜೊತೆಗೆ ಅಕಾಡೆಮಿಕ್ ಮತ್ತು ಪಠ್ಯೇತರ ಚಟುವಟಿಕೆಗಳಲ್ಲಿ ಹೆಚ್ಚು ಆಸಕ್ತಿ ಇದ್ದರೆ ಜ್ಞಾನಾರ್ಜನೆ, ನಾಯಕತ್ವ ಗುಣ, ಉನ್ನತ ಗುರಿ ತಲುಪುವ ಕನಸು ನನಸಾಗುತ್ತದೆ ಎಂದು ಅವರು ಹೇಳಿದರು.

ದಾವಣಗೆರೆಯಂಥ ನಗರಗಳಲ್ಲಿ ಕಲೆ, ನಾಟಕ, ಸಾಹಿತ್ಯ ಚಟುವಟಿಕೆಗಳು ಹೆಚ್ಚಾಗಬೇಕು.ಬೆಂಗಳೂರಿನಲ್ಲಿರಂಗಶಂಕರ ಇದೆ. ಖ್ಯಾತ ಸಿನಿಮಾ ನಟರೆಲ್ಲರೂ ರಂಗಭೂಮಿಯಿಂದ ಬಂದವರು. ದ್ರಾವಿಡ್ ಪಡುಕೋಣೆ ಅಕಾಡೆಮಿ, ಪ್ರಕಾಶ್ ಪಡುಕೋಣೆ ಅಕಾಡೆಮಿಯಂಥ ಕ್ರೀಡಾ ಚಟುವಟಿಕೆಗಳು ನಡೆಸುವ ಸ್ಥಳಗಳಿಗೆ ಮಕ್ಕಳನ್ನು ಕರೆದುಕೊಂಡು ಹೋಗಿ. ಅದೇ ರೀತಿಯಲ್ಲಿ ಮೌಂಟ್ ಕಾರ್ನಲ್ ಸ್ಕೂಲ್ ನಲ್ಲಿ ದೀಪಿಕಾ ಪಡುಕೋಣೆ, ರಾಧಿಕಾ ಪಂಡಿತ್ ಸೇರಿದಂತೆ ಖ್ಯಾತನಾಮರು ಓದಿದ ಸಂಸ್ಥೆ. ದೊಡ್ಡ ಸಂಸ್ಥೆಗಳು, ವಿವಿಗಳಲ್ಲಿ ಓದಿದಾಗ ಅವಕಾಶಗಳು ಬೇಗನೇ ಹುಡುಕಿಕೊಂಡು ಬರುತ್ತವೆ ಎಂದು ಸಲಹೆ ನೀಡಿದರು.

ನವೋದಯ ಶಾಲೆಯಲ್ಲಿ ನಾನು ಓದಿದ್ದರಿಂದ ಇಷ್ಟೊಂದು ಸಾಧನೆ ಮಾಡಲಾಯಿತು. ಕಕ್ಕರಗೊಳ್ಳದಲ್ಲೇ ಓದಿಕೊಂಡು ಇದ್ದವರು ದನ ಕಾಯುತ್ತಿದ್ದಾರೆ.ಸಂಪನ್ಮೂಲ,ಜ್ಞಾನಾರ್ಜನೆ ಪಡೆದುಕೊಳ್ಳಲು ನವೋದಯ, ಉನ್ನತ ಶಿಕ್ಷಣ ಸಂಸ್ಥೆಗಳು ಸಹಕಾರಿ ಎಂದು ಹೇಳಿದರು.

ವೇದಿಕೆಯಲ್ಲಿ ಹರಿಹರ ಶಾಸಕ ಬಿ. ಪಿ. ಹರೀಶ್, ಐಟಿಐ ಕಾಲೇಜಿನ ಪ್ರಾಂಶುಪಾಲರು, ಬೋಧಕ, ಬೋಧಕೇತರ ಸಿಬ್ಬಂದಿ, ಪೋಷಕರು ಹಾಗೂ ವಿದ್ಯಾರ್ಥಿಗಳು ಹಾಜರಿದ್ದರು.

## ಫಾಸ್ಟ್ ನ್ಯೂಸ್

### ಪಿಯು ಫಲಿತಾಂಶ ಉತ್ತಮಪಡಿಸಲು ಪ್ರಾಮಾಣಿಕ ಯತ್ನ



» **ಚಳ್ಳಕೆರೆ**

ಸರ್ಕಾರಿ ಪದವಿಪೂರ್ವ ಕಾಲೇಜುಗಳಲ್ಲಿ ಪ್ರಸ್ತುತ ವರ್ಷದ ದ್ವಿತೀಯ ಪಿಯುಸಿ ಫಲಿತಾಂಶ ಇಳಿಮುಖವಾಗಿದ್ದು, ವಿದ್ಯಾರ್ಥಿಗಳ ಭವಿಷ್ಯದ ಹಿತದೃಷ್ಠಿಯಿಂದ ಫಲಿತಾಂಶವನ್ನು ಉತ್ತಮಪಡಿಸಲು ಎಲ್ಲಾ ಪ್ರಾಮಾಣಿಕ ಪ್ರಯತ್ನವನ್ನು ಮಾಡುವ ಭರವಸೆಯನ್ನು ಸರ್ಕಾರಿ ಪದವಿಪೂರ್ವಕಾಲೇಜಿನ ನೂತನ ಪ್ರಾಂಶುಪಾಲ ಕೆ.ಎಚ್.ರಾಜು ತಿಳಿಸಿದರು. ಅವರು, ಸೋಮವಾರ ಕಾಲೇಜಿನ ಪ್ರಾಂಶುಪಾಲರಾಗಿ ಅಧಿಕಾರ ವಹಿಸಿಕೊಂಡ ಹಿನ್ನೆಲೆಯಲ್ಲಿ ಬೋಧಕ ವರ್ಗ ಹಾಗೂ ಸಿಬ್ಬಂದಿ ಅಭಿನಂದನೆ ಸಲ್ಲಿಸಿ, ಸನ್ಮಾನಿಸಿದ್ದು, ಸನ್ಮಾನವನ್ನು ಸ್ವೀಕರಿಸಿ ಮಾತನಾಡಿದರು. ಪದವಿಪೂರ್ವ ಶಿಕ್ಷಣ ಇಲಾಖೆ ಪ್ರತಿಯೊಬ್ಬ ವಿದ್ಯಾರ್ಥಿಯ ಜೀವನಮಟ್ಟವನ್ನು ಸುಧಾರಿಸಲು ಉತ್ತಮ ವೇದಿಕೆಯಾಗಿದೆ. ಎಸ್‌ಎಸ್‌ಎಲ್‌ಸಿ ನಂತರ ಬದುಕು ರೂಪಿಸಿಕೊಳ್ಳಲು ವಿದ್ಯಾರ್ಥಿಗಳು ಪದವಿಪೂರ್ವ ಶಿಕ್ಷಣದ ಮೂಲಕ ತಮ್ಮ ಉದ್ಯೋಗದ ಕನಸನ್ನು ಕಾಣಲು ಆರಂಭಿಸುತ್ತಾರೆ. ಪ್ರತಿಯೊಬ್ಬ ವಿದ್ಯಾರ್ಥಿಯ ಜೀವನದ ಚಕ್ರ ಇಲ್ಲಿಂದಲೇ ಆರಂಭಗೊಳ್ಳುತ್ತದೆ. ನಾನು ಸಹ ನಿಮ್ಮೊಂದಿಗೆ ಸೇರಿ ಫಲಿತಾಂಶ ಉತ್ತಮ ಪಡಿಸಲು ಎಲ್ಲಾಅಗತ್ಯಕ್ರಮಗಳನ್ನುಕೈಗೊಳ್ಳುತ್ತೇನೆ.ವಿಶೇಷವಾಗಿ ಕ್ಷೇತ್ರದ ಶಾಸಕ ಟಿ.ರಘುಮೂರ್ತಿಗೂ ಶಿಕ್ಷಣ ಬಗ್ಗೆ ಅಪಾರವಾದ ಗೌರವವನ್ನು ಹೊಂದಿದ್ದು ಅವರ ಮಾರ್ಗದರ್ಶನದಲ್ಲಿ ಕಾರ್ಯನಿರ್ವಹಿಸುವ ಭರವಸೆ ನೀಡಿದರು. ಜಿಲ್ಲಾ ಉಪನ್ಯಾಸಕರ ಸಂಘದ ಮಾಜಿ ಅದ್ಯಕ್ಷ ಎಸ್.ಲಕ್ಷ್ಮಣ್ ಕಾರ್ಯಕ್ರಮದಲ್ಲಿ ಭಾಗವಹಿಸಿ ನೂತನ ಪ್ರಾಂಶುಪಾಲರಿಗೆ ಅಭಿನಂದನೆ ಸಲ್ಲಿಸಿ ಮಾತನಾಡಿದರು. ಚಳ್ಳಕೆರೆ ಪಿಯುಕಾಲೇಜಿಗೆ ಸುತ್ತಮುತ್ತಲಿನ ಬಡ ವಿದ್ಯಾರ್ಥಿಗಳುಹೆಚ್ಚಿನಸಂಖ್ಯೆಯಲ್ಲಿಆಗಮಿಸುತ್ತಾರೆ. ಕಾಲೇಜಿನ ಮೂರು ವಿಭಾಗಗಳಲ್ಲಿ ಹೆಚ್ಚಿನ ಸಂಖ್ಯೆಯ ವಿದ್ಯಾರ್ಥಿಗಳು ಶಿಕ್ಷಣ ಕಲಿಯುತ್ತಾರೆ. ಫಲಿತಾಂಶವನ್ನು ಉತ್ತಮಪಡಿಸುವ ಪ್ರಾಮಾಣಿಕ ಯತ್ನಕ್ಕೆ ಶುಭಹಾರೈಸುವುದಾಗಿ ತಿಳಿಸಿದರು. ಈ ಸಂದರ್ಭದಲ್ಲಿ ಎನ್‌ಎಸ್‌ಎಸ್ ಅಧಿಕಾರಿ ಬಿ.ಶಾಂತಕುಮಾರಿ, ಪುಷ್ಪಲತಾ, ಎಂ.ಶ್ರೀನಿವಾಸ್, ನಾಗರಾಜಬೆಳಗಟ್ಟ, ಎಚ್.ಆರ್.ಜಬಿವುಲ್ಲಾ, ಡಾ.ರೇಖಾ, ಹೀನಾಕೌಸರ್, ಜಾನಕಮ್ಮ, ಕೆ.ವಿ.ಚಂದ್ರಶೇಖರ್, ನಿರಂಜನ್, ರಾಘವೇಂದ್ರ, ವೀರಣ್ಣ, ಜಗದೀಶ್, ಪಟ್ಟರಂಗಪ್ಪ ಮುಂತಾದವರು ಉಪಸ್ಥಿತರಿದ್ದರು.

### ವಿದ್ಯುತ್ ಅವಘಡ ನಿಯಂತ್ರಣಕ್ಕೆ ಎಲ್ಲರ ಸಹಕಾರ ಅಗತ್ಯ



» **ಚಳ್ಳಕೆರೆ**

ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ಚಳ್ಳಕೆರೆ ಉಪವಿಭಾಗದ ವತಿಯಿಂದ ಗ್ರಾಹಕರ ಜಾಗೃತಿ ಕಾರ್ಯಕ್ರಮವನ್ನು ನಡೆಸಲಾಯಿತು. ಜಾಗೃತಿ ಕಾರ್ಯಕ್ರಮದ ಮೆರವಣಿಗೆಗೆ ಸಹಾಯಕ ಕಾರ್ಯಪಾಲಕ ಅಭಿಯಂತರ ಜಿ.ಶಿವಪ್ರಸಾದ್ ಚಾಲನೆ ನೀಡಿದರು. ಕಳೆದ ಹಲವಾರು ದಶಕಗಳಿಂದ ಬೆಸ್ಕಾಂ ಗ್ರಾಹಕರ ಹಿತರಕ್ಷಣೆಯನ್ನು ದೃಷ್ಟಿಯಲ್ಲಿಟ್ಟುಕೊಂಡು ಕಾರ್ಯನಿರ್ವಹಿಸುತ್ತಿದೆ. ರಾಜ್ಯದ ಕೋಟ್ಯಾಂತರ ಜನರಿಗೆ ಪ್ರತಿನಿತ್ಯ 24ಗಂಟೆಗಳ ಕಾಲ ವಿದ್ಯುತ್ ಸೌಕರ್ಯವನ್ನು ಒದಗಿಸುವ ಮಹತ್ತರ ಜವಾಬ್ದಾರಿ ಇಲಾಖೆಯ ಮೇಲಿದೆ. ಈ ಹಿನ್ನೆಲೆಯಲ್ಲಿ ಹಿರಿಯ ಅಧಿಕಾರಿಗಳೂ ಸೇರಿದಂತೆ ಎಲ್ಲಾ ಹಂತದ ಅಧಿಕಾರಿಗಳು ಸಾರ್ವಜನಿಕರಿಗೆ ಉತ್ತಮ ಸೇವೆ ನೀಡುವ ನಿಟ್ಟಿನಲ್ಲಿ ದಕ್ಷತೆ ಮತ್ತು ಪ್ರಾಮಾಣಿಕತೆಯಿಂದ ಕಾರ್ಯನಿರ್ವಹಿಸುತ್ತಿದ್ದಾರೆ. ಬೆಸ್ಕಾಂ ಇಲಾಖೆಯ ನಿಯಮಗಳನ್ನು ಎಲ್ಲರೂ ಪಾಲಿಸುವಂತೆ ಮನವಿ ಮಾಡಲಾಗುತ್ತಿದೆ ಎಂದರು. ಸಹಾಯಕ ಇಂಜಿನಿಯರ್ ದೇವರಾಜು ಮಾತನಾಡಿ, ನಗರ ಪ್ರದೇಶವೂ ಸೇರಿದಂತೆ ಗ್ರಾಮೀಣ ಭಾಗಗಳಲ್ಲಿ ವಿದ್ಯುತ್ ಸರಬರಾಜು ವ್ಯತ್ಯಯವಾಗದಂತೆ ಇಲಾಖೆ ಕಟ್ಟೆಚ್ಚರಿಕೆ ವಹಿಸುತ್ತಿದೆ. ಆದರೆ, ಕೆಲವೆಡೆ ಅನಧಿಕೃತ ವಿದ್ಯುತ್ ಸಂಪರ್ಕ ಪಡೆದು ಪಂಪ್‌ಸೆಟ್ ಚಾಲನೆ ಮಾಡುವ ಪರಿಪಾಠ ಮುಂದುವರೆದಿದೆ. ವಿದ್ಯುತ್ ಕಂಬಗಳು, ಲೈನ್ ಮುಂತಾದವುಗಳಮೇಲೆ ಬಟ್ಟೆ ಹಾಕುವುದು, ಅವುಗಳನ್ನು ತಾಗಿಸಿಓಡಾಡುವುದು, ಮನೆಯಲ್ಲಿ ವಿದ್ಯುತ್ ರಿಪೇರಿ ಮಾಡುವುದು, ಕಂಬಗಳಿಗೆ ಒರಗಿ ನಿಲ್ಲುವುದು ಒಳ್ಳೆಯದ್ದಲ್ಲ. ಈ ನಿಟ್ಟಿನಲ್ಲಿ ಇಲಾಖೆ ಇಂತಹ ಜಾಗೃತಿ ಕಾರ್ಯಕ್ರಮದ ಮೂಲಕ ಅರಿವು ಮೂಡಿಸುತ್ತಿದೆ ಎಂದರು.

## ಮತ್ತೆ ಮತ್ತೆ ನಮ್ಮನ್ನು ಪ್ರಶ್ನಿಸಿಕೊಳ್ಳಲೇಬೇಕಿದೆ,

## ಮತ್ತೆ ಮತ್ತೆ ನಮ್ಮ ಆತ್ಮಾವಲೋಕನ ಮಾಡಿಕೊಳ್ಳಲೇಬೇಕಿದೆ



» ಲೇಖನ
ವಿವೇಕಾನಂದ. ಹೆಚ್.ಕೆ.
9844013068

ಮತ್ತೆ ಮತ್ತೆ ನಮ್ಮನ್ನು ಪ್ರಶ್ನಿಸಿಕೊಳ್ಳಲೇಬೇಕಿದೆ, ಮತ್ತೆ ಮತ್ತೆ ನಮ್ಮ ಆತ್ಮಾವಲೋಕನ ಮಾಡಿಕೊಳ್ಳಲೇಬೇಕಿದೆ

ಏಕೆಂದರೆ ಕೇವಲ 20/25 ಲಕ್ಷ ಬೆಲೆಯ ಒಂದು ಕಾರು ನಮ್ಮ ಸಮಾಜದಲ್ಲಿ ಒಬ್ಬ ವ್ಯಕ್ತಿಯ ಇಡೀ ವ್ಯಕ್ತಿತ್ವವನ್ನೇ ಬದಲಿಸುತ್ತದೆ ಎಂಬುದು ಖಂಡಿತ ವಾಸ್ತವಿಕ ಸತ್ಯ.

ಕಾರು ಹೊಂದಿದ ವ್ಯಕ್ತಿ ಇದ್ದಕ್ಕಿದ್ದಂತೆ ಕಾರಿನ ಮಹಿಮೆಯಿಂದಲೇ ಬುದ್ದಿವಂತನೆಂತಲೋ, ಶ್ರಮಜೀವಿಯೆಂತಲೋ, ಯಾವುದೋ ಪಕ್ಷ ಅಥವಾ ಸಂಘಟನೆಯ ನಾಯಕನೆಂತಲೋ, ಶ್ರೀಮಂತನೆಂತಲೋ, ಬಹುತೇಕರಿಂದ ಹುಸಿ ಗೌರವ ಪಡೆಯಲಾರಂಭಿಸುತ್ತಾನೆ.

ಆತನ ಹಿನ್ನಲೆ, ಹಣದ ಮೂಲ,ವರ್ತನೆ ಯಾವುದೂ ಮುಖ್ಯವಾಗುವುದಿಲ್ಲ.

ಅದೇ ಒಬ್ಬ ಸರಳ, ಸಜ್ಜನ, ವಿದ್ಯಾವಂತ, ನಿಜವಾದ ಶ್ರಮಜೀವಿ ಸಾರ್ವಜನಿಕ ಸಾರಿಗೆ ಬಸ್ಸಿನಲ್ಲೋ, ಸೈಕಲ್ ನಲ್ಲೋ ಓಡಾಡುತ್ತಾ ಸಾಧಾರಣ ಬಟ್ಟೆ ಧರಿಸಿದ್ದರೆ ನಿಜವಾಗಿ ಆತನಿಗೆ ಸಿಗುವ ಮರ್ಯಾದೆ ಅಷ್ಟಕಷ್ಟೇ. ಅದರಲ್ಲೂ ಕೆಲವು ನಿರ್ದಿಷ್ಟ ಸ್ಥಳಗಳಲ್ಲಿ ಆತ ಅವಮರ್ಯಾದೆಗೆ ಒಳಗಾಗುವ ಸಾಧ್ಯತೆಯೇ ಹೆಚ್ಚು.

ಬಂಧು ಬಳಗದವರಲ್ಲಿ ಸರಳ ವ್ಯಕ್ತಿಂ ಯ ಬಗ್ಗೆ ಆತ ಏನೋ ಒಬ್ಬ ಮಾನಸಿಕ ಅಸ್ವಸ್ಥ ಅಥವಾ ಕೆಲಸಕ್ಕೆ ಬಾರದವನು ಎಂಬಂತೆ ಸಹಾನುಭೂತಿ ವ್ಯಕ್ತವಾಗುತ್ತದೆ.

ಕೈ ಬೆರಳುಗಳಿಗೆ ಉಂಗುರ,
ಕೈಗೆ ಚಿನ್ನದ ಚೈನು,
ಕತ್ತಿಗೆ ಚಿನ್ನದ ಸರ ಹಾಕಿಕೊಳ್ಳುವ ವ್ಯಕ್ತಿಗೆ ಸಿಗುವ ಗೌರವ, ಸಾಧಾರಣ ಬಟ್ಟೆಯ ಸರಳ ಮತ್ತು ಒಳ್ಳೆಯ ವ್ಯಕ್ತಿಗೆ ಸಿಗುವುದೇ ಇಲ್ಲ.

ನಾನು ಇಲ್ಲಿ ಶ್ರೀಮಂತರನ್ನು ದೂಷಿಸುತ್ತಿಲ್ಲ ಅಥವಾ ಅವರೆಲ್ಲರೂ ಕೆಟ್ಟವರು ಎಂದು ಹೇಳುತ್ತಿಲ್ಲ. ಆದರೆ ಸಮಾಜದ ಮನೋಭಾವಹೇಗೆಹಣವಂತರಿಗೆಪ್ರೋತ್ಸಾಹದಾಯಕವಾಗಿದೆ ಮತ್ತು ಅದರಿಂದ ಹೇಗೆ ಭ್ರಷ್ಟಾಚಾರ ಹೆಚ್ಚಾಗುತ್ತದೆ ಎಂದು ಮಾತ್ರ ಹೇಳುತ್ತಿದ್ದೇನೆ.

ಹಣಕ್ಕೆ ಗುಣಕ್ಕಿಂತ ಮರ್ಯಾದೆ ಜಾಸ್ತಿಯಾದಾಗ ಜನ ಹಣದ ಹಿಂದೆ ಬೀಳುತ್ತಾರೆ ಮತ್ತು ಅದನ್ನು ಪಡೆಯಲು ಯಾವ ಹಂತಕ್ಕೂ ಹೋಗುತ್ತಾರೆ ಎಂಬ ಅನುಮಾನ ನನ್ನದು.

ಇದರಿಂದಾಗಿ ಗುಣ ಹಿಂದೆ ಸರಿಯುತ್ತದೆ. ಸಮಾಜ ಅಸ್ತವ್ಯಸ್ತವಾಗುತ್ತದೆ.

ಮೌಲ್ಯಗಳು ನಶಿಸುತ್ತವೆ. ಬಹುಶಃ ಈಗ ಆಗುತ್ತಿರುವುದು ಇದೇ.

ಯಾವುದೇ ಮೂಲದಿಂದಾದರು ಹಣ ಅಧಿಕಾರ ಪಡೆಯಲು ಪ್ರಯತ್ನಿಸುವ ಮನೋಭಾವ ಪ್ರಾಮುಖ್ಯತೆ ಹೊಂದಲು ಇದು ಬಹುಮುಖ್ಯ ಕಾರಣವಾಗಿದೆ.

ಆದ್ದರಿಂದ ತಿಳಿದ ಕೆಲವರಾದರೂ ಇದನ್ನು ಅರಿತು ತಮ್ಮ ನಡವಳಿಕೆಗಳಲ್ಲಿ ಬದಲಾವಣೆ ಮಾಡಿಕೊಂಡರೆ ಸಮಾಜವನ್ನು ಕಾಡುತ್ತಿರುವ ಬಹಳಷ್ಟು ಸಮಸ್ಯೆಗಳು ಕಡಿಮೆಯಾಗುತ್ತದೆ ಮತ್ತು ಹಿಂದಿನಂತೆ ಗುಣಕ್ಕೆ ಗೌರವ ದೊರೆಯುತ್ತದೆ ಎಂಬ ಆಶಯದೊಂದಿಗೆ ................



### ನಗರಸಭೆಯ ನೂತನ ಅಧ್ಯಕ್ಷರಾಗಿ ಶಿಲ್ಪ ಮುರುಳಿ ಅವಿರೋಧ ಆಯ್ಕೆ –ಮುಗಿಲುಮುಟ್ಟಿದ ಕಾರ್ಯಕರ್ತರ ಸಂತಸ

# ನಗರದ ಅಭಿವೃದ್ದಿಗೆ ಶ್ರಮಿಸಿ: ರಘುಮೂರ್ತಿ

» **ಚಳ್ಳಕೆರೆ**

ಇಲ್ಲಿನ ನಗರಸಭೆ ನೂತನ ಅಧ್ಯಕ್ಷರಾಗಿ ಕಳೆದ ನಾಲ್ಕು ತಿಂಗಳ ಹಿಂದೆ ನಾಲ್ಕನೇ ವಾರ್ಡ್‌ನಿಂದ ಅವಿರೋಧವಾಗಿ ಆಯ್ಕೆಗೊಂಡ ಶಿಲ್ಪಮುರುಳಿ ನಗರಸಭೆಯ ನೂತನ ಅಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾದರು.

ಉಪವಿಭಾಗಾಧಿಕಾರಿ ಮೊಹಬೂಬ್ ಜಿಲಾನಿ ಚುನಾವಣಾದಿ ,ಕಾರಿಯಾಗಿ ಕಾರ್ಯನಿರ್ವಹಿಸಿದ್ದು, ಅಧ್ಯಕ್ಷ ಸ್ಥಾನಕ್ಕೆ ಶಿಲ್ಪಿಮುರುಳಿಮಾತ್ರನಾಮಪತ್ರಸಲ್ಲಿಸಿದ್ದರು, ಬಿಜೆಪಿ ಹಾಗೂ ಜೆಡಿಎಸ್ ಸದಸ್ಯರೂ ಸಹ ಬೆಂಬಲ ನೀಡಿದ್ದು, ನಾಮಪತ್ರ ಪರಿಶೀಲನೆ ನಂತರ ಶಿಲ್ಪಿಮುರುಳಿ ನಗರಸಭೆಯ ನೂತನ ಅಧ್ಯಕ್ಷರಾಗಿದ್ದಾರೆಂದು ಚುನಾವಣಾಧಿಕಾರಿಘೋಷಿಸಿದರು. ನಗರಸಭೆಯ ಕಾರ್ಯಾಲಯದ ಮುಂಭಾಗದಲ್ಲಿ ನೂರಾರು ಜನಕಾರ್ಯಕರ್ತರು,ಪಕ್ಷದಮುಖಂಡರು, ಪದಾಧಿಕಾರಿಗಳು, ಚುನಾಯಿತ ಸದಸ್ಯರು, ಅಧಿಕಾರಿವರ್ಗ ಹಾಗೂ ಪೌರನೌಕರರು ಸಂತಸ ವ್ಯಕ್ತಪಡಿಸಿದರು. ಪಕ್ಷದ ಕಾಂಗ್ರೆಸ್ ಕಾರ್ಯಕರ್ತರು ಮೆರವಣಿಗೆಯುದ್ದಕ್ಕೂ ಪಟಾಕಿಸಿಡಿಸಿ ಸಂಭ್ರಮಿಸಿದರು.



ಮೆರವಣಿಗೆಯಲ್ಲಿ ಚುನಾಯಿತ ನಗರಸಭಾ ಸದಸ್ಯರು ಹಾಗೂ ಅಧಿಕಾರಿಗಳು ಹೆಜ್ಜೆಹಾಕಿದರು. ನೆಹರೂ ವೃತ್ತದಲ್ಲಿ ಮೆರವಣಿಗೆ ಆಗಮಿಸಿದ ಸಂದರ್ಭದಲ್ಲಿ ಚಲನಚಿತ್ರನಟ ದೊಡ್ಡಣ್ಣ ಆಗಮಿಸಿ ನೂತನ ಅಧ್ಯಕ್ಷೆಗೆ ಮಾಲಾರ್ಪಣೆ ಮಾಡಿ ಶುಭಕೋರಿದರು. ಅಧ್ಯಕ್ಷೆಯಾಗಿ ಶಿಲ್ಪಿಮುರುಳಿ ಆಯ್ಕೆಯಾದ ಮಾಹಿತಿ ಪಡೆದ ಶಾಸಕ ಟಿ.ರಘುಮೂರ್ತಿ ಆಗಮಿಸಿ ನೂತನ ಅಧ್ಯಕ್ಷರಿಗೆ ಶುಭಕೋರಿದರು.

ನಗರ ವಿಸ್ತಾರವಾಗಿ ಬೆಳೆದಿದ್ದು ನಗರಸಭೆಯ ಅಭಿವೃದ್ದಿಗೆ ಸಂಬಂಧಿಸಿದಂತೆ ಎಲ್ಲಾ ಸದಸ್ಯರನ್ನು ಅಧಿಕಾರಿಗಳು ಹಾಗೂ ಸಿಬ್ಬಂದಿಯನ್ನು ವಿಶ್ವಾಸಕ್ಕೆ ತೆಗೆದುಕೊಂಡು ಕಾರ್ಯನಿರ್ವಹಿಸಬೇಕು. ರಾಜ್ಯ ಸರ್ಕಾರ ಪೌರಾಡಳಿತ ಇಲಾಖೆ ಮೂಲಕ ನಗರಸಭೆಗೆ ನೀಡುವ ಅನುದಾನವನ್ನು ಸದ್ಬಳಕೆ ಮಾಡುವ ನಿಟ್ಟಿನಲ್ಲಿ ಯೋಜನೆಗಳನ್ನು ಸಿದ್ದಪಡಿಸಿ ಜಾಗೃತಿಯಿಂದ ಕಾರ್ಯನಿರ್ವಹಿಸಬೇಕು. ಪ್ರಸ್ತುತ ಕಾಂಗ್ರೆಸ್ ಸರ್ಕಾರ 2020ರಿಂದ ನಗರಸಭೆ ಅಧಿಕಾರವನ್ನು ನಡೆಸುತ್ತಾ ಬಂದಿದ್ದು 2025ಕ್ಕೆ ಅವಧಿ ಮುಗಿದರೂ ಈ ಅವಧಿಯಲ್ಲಿಯಾದ ಅಭಿವೃದ್ದಿ ಕೆಲಸಗಳ ಬಗ್ಗೆ ಜನರು ಮೆಚ್ಚುಗೆ ವ್ಯಕ್ತಪಡಿಸುವ ರೀತಿಯಲ್ಲಿ ಕಾರ್ಯನಿರ್ವಹಿಸುವಂತೆ ಸಲಹೆ ನೀಡಿದರು.

ನೂತನ ಅಧ್ಯಕ್ಷೆ ಶಿಲ್ಪಮುರುಳಿ ಮಾತನಾಡಿ, ನನಗೆ ನಗರಸಭೆಗೆ ಸ್ಪರ್ಧಿಸಲು ಮತ್ತು ಅಧ್ಯಕ್ಷ ಸ್ಥಾನ ಪಡೆಯಲು ಶಾಸಕ ಟಿ.ರಘುಮೂರ್ತಿಯವರು ಹೆಚ್ಚು ಶ್ರಮಿಸಿದ್ದಾರೆ. ಚಿತ್ರದುರ್ಗ ಶಾಸಕ ಕೆ.ಸಿ.ವೀರೇಂದ್ರ(ಪಪ್ಪಿ), ಕೆ.ಸಿ.ನಾಗರಾಜು ಸೇರಿದಂತೆ ಅನೇಕ ಪಕ್ಷದ ದುರೀಣರು ನನಗೆ ಬೆನ್ನೆಲುವಾಗಿ ನಿಂತು ಈ ಸ್ಥಾನ ನೀಡಿದ್ದಾರೆ. ಎಲ್ಲರ ಶುಭಹಾರೈಕೆ ಮತ್ತು ಸಹಕಾರದಿಂದ ಅಧ್ಯಕ್ಷ ಸ್ಥಾನ ದೊರಕಿದೆ. ಇನ್ನೂ ಕೆಲವೇ ತಿಂಗಳು ಈ ಸ್ಥಾನದಲ್ಲಿ ಕಾರ್ಯನಿರ್ವಹಿಸಲು ಸಾಧ್ಯವಾಗುತ್ತದೆ. ಶಾಸಕ ಮಾರ್ಗದರ್ಶನದಲ್ಲಿ ನಗರಸಭೆಯ ಸರ್ವತೋಮುಖ ಅಭಿವೃದ್ದಿಗೆ ಎಲ್ಲಾ ಪಕ್ಷದ ಸದಸ್ಯರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಉತ್ತಮ ಕಾರ್ಯನಿರ್ವಹಿಸುವ ಭರವಸೆ ನೀಡಿದರು.

ನಗರಸಭೆಯ ಉಪಾಧ್ಯಕ್ಷೆ ಸಿ.ಕವಿತಾಬೋರಯ್ಯ, ಸ್ಥಾಯಿಸಮಿತಿ ಅಧ್ಯಕ್ಷ ಟಿ.ಮಲ್ಲಿಕಾರ್ಜುನ್, ಸದಸ್ಯರಾದ ಆರ್.ಮಂಜುಳಾ, ಸುಮಕ್ಕ, ಕವಿತಾವೀರೇಶ್, ಸುಮಭರಮಣ್ಣ, ಸುಜಾತಪಾಲಯ್ಯ, ಜಯಲಕ್ಷ್ಮಿ, ಜೈತುಂಬಿ, ರಮೇಶ್‌ಗೌಡ, ಕೆ.ವೀರಭದ್ರಪ್ಪ, ಎಂ.ಕೆ. ರಾಘವೇಂದ್ರ, ಚಳ್ಳಕೆರೆಯಪ್ಪ, ವೀರೂಪಾಕ್ಷಿ ಮುಂತಾದವರು ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T